ಸಂಪುಟ : 8 ಸಂಚಿಕೆ : 199 ಪುಟ : 4 ಬೆಲೆ : 3.00 ಮಂಗಳವಾರ ಸಪ್ಟೆಂಬರ್ 12, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 199 Pages : 4 Price : 3.00 Tuesday September 12, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಶಿವ-ಶರಣರ ಭಾವಚಿತ್ರ ಮೆರವಣಿಗೆಯ ಸಂಭ್ರಮ । ಹಾಲಗೊಂಡ ಬಸವೇಶ್ವರ ಜಾತ್ರೆಯಲ್ಲಿ ತತ್ವಪದಗಳ ಸುರಿಮಳೆ

# ಸಂಭ್ರಮದ ಬಸವೇಶ್ವರ ಜಾತ್ರೆ







**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ನಾಡಿನ ಶಿವಶರಣರ ಭಾವಚಿತ್ರ, ಮೂರ್ತಿಗಳ ವಿವಿಧ ಹೂವಿನ ಅಲಂಕಾರ ಮಂಟಪದಲ್ಲಿ ಮೆರವಣಿಗೆ, ಶರಣರ ವಚನಗಳ, ತತ್ವ ಪದಗಳ ಭಜನಾ ಕಲಾವಿದರ ಹಾಡುಗಾರಿಕೆ, ಒಂದೇ ಬಣ್ಣದ ಬಟ್ಟೆಯನ್ನು ಧರಿಸಿ ಪಾಲ್ಗೊಂಡ ಭಜನಾ ಕಾರ್ಯಕರ್ತರು... ಇದು ಐತಿಹಾಸಿಕ ಲಕ್ಕುಂಡಿ ಗ್ರಾಮದ ಹಾಲಗೊಂಡ ಬಸವೇಶ್ವರ ರಥೋತ್ಸವದ ಅಂಗವಾಗಿ ಇಡೀ ಗ್ರಾಮದಲ್ಲಿ ಕಂಡು ಬಂದ ಶ್ರಾವಣದ ಕೊನೆಯ ಸೋಮವಾರದ ಸಂಭ್ರಮ.

ಸುಮಾರು 120 ವಸಂತಗಳನ್ನು ಪೂರೈಸಿರುವ ಐಹಾಸಿಕ ಹಾಲಗೊಂಡ ಬಸವೇಶ್ವರ ಜಾತ್ರೆಯಲ್ಲಿ ಗ್ರಾಮದ 14 ಭಜನಾ ತಂಡಗಳು ಭಾಗವಹಿಸಿ, ನಾಡಿನ ಶರಣರ ತತ್ವಪದಗಳ ಹಾಡಿನೊಂದಿಗೆ ಹಮ್ಮಿಕೊಂಡ ಭಾವಚಿತ್ರ ಮೆರವಣಿಗೆಯು ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ನೂರಾರು ಭಕ್ತರ ಕಣ್ಮನ ಸೆಳೆದು ಮಂತ್ರ ಮುಗ್ಧರನ್ನಾಗಿಸಿತು.

ಇದಕ್ಕೂ ಪೂರ್ವ ವಿವಿಧ ಹೂವುಗಳಿಂದ ಅಲಂಕರಿಸಿದ ಬಸವಣ್ಣ ಮೂರ್ತಿಗೆ ಶರಣಯ್ಯ ಪತ್ರಿಮಠ ಅವರು ವಿಧಿ-ವಿಧಾನಗಳೊಂದಿಗೆ ರುದ್ರಾಭಿಷೇಕ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು. ನಂತರ ಸಿದ್ಧ ಸಮಾಧಿ ಯೋಗ ಸಾಧಕರ ಆಶ್ರಯದಲ್ಲಿ, ಆಚಾರ್ಯ ರಾಘವೇಂದ್ರ ಕೊಪ್ಪಳ ಅವರ ನೇತೃತ್ವದಲ್ಲಿ ಮೃತ್ಯುಂಜಯ ಹೋಮ ನೆರವೇರಿತು. ಪೂಜಾ ಕಾರ್ಯಕ್ರಮಗಳ ತರುವಾಯ ಅನ್ನ ಅನ್ನಸಂತರ್ಪಣೆ ಜರುಗಿತು.

ಮೆರವಣಿಗೆಯಲ್ಲಿ ಅಲ್ಲಮಪ್ರಭುದೇವರು, ವಿರೂಪಾಕ್ಷೇಶ್ವರ, ಮಹಾಂತೇಶ್ವರ, ಮಾರುತಿ, ಬಸವೇಶ್ವರ, ಪಂಚಾಚಾರ್ಯ, ಬಿನ್ನಾಳ ಬಸವೇಶ್ವರ, ರಾಮಲಿಂಗೇಶ್ವರ, ನಾಗನಾಥ, ಲೆಕ್ಕದ ವೀರೇಶ್ವರ, ಅನ್ನದಾನೀಶ್ವರ, ಮಲ್ಲಿಕಾರ್ಜುನ, ಮರುಳ ಸಿದ್ದೇಶ್ವರ, ಆಂಜನೇಯ ಭಜನಾ ಸಂಘಗಳು ಪಾಲ್ಗೊಂಡು, ಭಕ್ತಿ ಮೆರೆದರು.

> ಭಜನಾ ತಂಡಗಳಿಗೆ ಪ್ರೋತ್ಸಾಹದಾಯಕವಾಗಿ ಕೊಡುವ ಕಾಣಿಕೆಯಂತೆ ಈ ಸಲ ಡಗ್ಗಾ ವಾದ್ಯವನ್ನು ಗ್ರಾಮ ಪಂಚಾಯಿತಿ ಮುಂಭಾಗದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಎಸ್ ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸರ್ವ ಸದಸ್ಯರು ನೀಡಿ ಕಲಾವಿದರ ತತ್ವ ಪದಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿ, ಪ್ರೋತ್ಸಾಹಿಸಿದರು.

---

### 2023-24ನೇ ಸಾಲಿನ ಗದಗ ತಾಲೂಕಾ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿದ ಎಸ್.ವಿ ಸಂಕನೂರ

## ಕ್ರೀಡಾಪಟುಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿ



> ಗ್ರಾಮೀಣ ಪ್ರದೇಶದ ಪ್ರತಿಭಾವಂತ ಕ್ರೀಡಾಪಟುಗಳಿಗೆ ಸೂಕ್ತ ತರಬೇತಿಯನ್ನು ನೀಡಲಾಗುತ್ತಿದೆ. ಖೇಲೋ ಇಂಡಿಯಾ ಟೀಮ್‌ನಲ್ಲಿ ಆಯ್ಕೆಯಾದ ಕ್ರೀಡಾಪಟುಗಳಿಗೆ ಪ್ರತಿ ವರ್ಷ 1.20 ಲಕ್ಷ ರೂ. ನೀಡಲಾಗುತ್ತದೆ. ಕ್ರೀಡಾಪಟುಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಕ್ರೀಡಾಪಟುಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕಲ್ಲದೆ, ಕ್ರೀಡೆ ಮಾತ್ರವಲ್ಲ ಪರೀಕ್ಷೆಯಲ್ಲಿ ಕೂಡಾ ಸೋಲು-ಗೆಲುವನ್ನು ಸಮನಾಗಿ ಸ್ವೀಕರಿಸಬೇಕು.
>
> **– ಎಸ್.ವಿ ಸಂಕನೂರ.**
> ವಿಧಾನ ಪರಿಷತ್ ಸದಸ್ಯರು.

**■ ವಿಜಯಸಾಕ್ಷಿ ಸುದ್ದಿ, ಗದಗ**

ಮನುಷ್ಯ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಲು ಕ್ರೀಡೆ ಸಹಕಾರಿಯಾಗಲಿದೆ. ಏಷಿಯನ್ ಗೇಮ್ಸ್‌ನಲ್ಲಿ ಕ್ರೀಡಾಪಟುಗಳ ಸಾಧನೆ ನಮಗೆ ತೃಪ್ತಿ ತಂದಿದೆ. ಆದರೆ ಒಲಂಪಿಕ್ ಗೇಮ್ಸ್‌ನಲ್ಲಿ 48ನೇ ಸ್ಥಾನ ಪಡೆದಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಮುಂಬರುವ ಒಲಂಪಿಕ್ ಪಂದ್ಯದಲ್ಲಿ 10ನೇ ಸ್ಥಾನ ಪಡೆಯಬೇಕೆಂಬ ಉದ್ದೇಶದಿಂದ ಪ್ರಧಾನಮಂತ್ರಿ ನರೇಂದ್ರ ಮೋದಿ 2020ರಲ್ಲಿ ಖೇಲೋ ಇಂಡಿಯಾ ಯೋಜನೆಯನ್ನು ಜಾರಿಗೆ ತಂದಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ ಸಂಕನೂರ ನುಡಿದರು.

ಅವರು ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ ಸೋಮವಾರ ನಡೆದ 2023-24ನೇ ಸಾಲಿನ ಗದಗ ತಾಲೂಕಾ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ▸▸3ನೇ ಪುಟಕ್ಕೆ

---

### ಶ್ರೀ ದುಂಡಿಬಸವೇಶ್ವರ ಜಾತ್ರಾ ಮಹೋತ್ಸವದ ಧರ್ಮ ಸಮಾರಂಭದಲ್ಲಿ ನೊಣವಿನಕೆರೆ ಶ್ರೀಗಳು

## ಉದಾತ್ತ ಬದುಕಿಗೆ ಧರ್ಮಸಭೆಗಳು ವೇದಿಕೆಯಾಗಿವೆ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

'ಧರ್ಮೋ ರಕ್ಷತಿ ರಕ್ಷಿತಃ' ಎಂಬ ವೇದವಾಣಿ ಸೂರ್ಯಚಂದ್ರರಷ್ಟೇ ಸತ್ಯವಾಗಿದ್ದು, ಪ್ರತಿಯೊಬ್ಬರೂ ತಮ್ಮ ಬದುಕಿನುದ್ದಕ್ಕೂ ದೇವರು, ಧರ್ಮಕಾರ್ಯ, ದಾನ, ದಯೆ ಮತ್ತು ಮಾನವೀಯತೆ ರೂಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಜನರಲ್ಲಿ ಧರ್ಮ, ಸಂಸ್ಕೃತಿ, ಆಚಾರಣೆ, ಸ್ನೇಹ-ಪ್ರೀತಿಯ ಮೌಲ್ಯಗಳಡಿ ಬದುಕು ನಡೆಸುವಂತಾಗಲು ಜಾತ್ರಾಮಹೋತ್ಸವ, ಧರ್ಮಸಭೆಗಳು ವೇದಿಕೆಯಾಗಿವೆ ಎಂದು ನೊಣವಿನಕೆರೆ ಕಾಡಸಿದ್ದೇಶ್ವರಮಠದ ಡಾ. ಕರಿವೃಷಭದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮಿಗಳು ಹೇಳಿದರು.

ಅವರು ಸಮೀಪದ ಗುಲಗಂಜಿಕೊಪ್ಪ ಗ್ರಾಮ ವ್ಯಾಪ್ತಿಯ ಶ್ರೀ ದುಂಡಿಬಸವೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ಸೋಮವಾರ ನಡೆದ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಗುರು-ಹಿರಿಯರು ತೆ-ೂೀರಿದ ಸನ್ಮಾರ್ಗ, ಸಂಸ್ಕೃತಿ, ಆಚರಣೆ, ಸಂಪ್ರದಾಯಗಳನ್ನು ಮರೆಯಬಾರದು. ಜಾತ್ರೆಗಳು ಜಾತಿ, ಧರ್ಮಗಳ ಎಲ್ಲೆ ಮೀರಿ ಪರಸ್ಪರರಲ್ಲಿ ಬಾಂಧವ್ಯ, ಸೌಹಾರ್ದತೆ, ಸ್ನೇಹ ಬೆಸೆಯುವ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತವೆ. ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಲೋಕ ಕಲ್ಯಾಣಕ್ಕಾಗಿ ಹೋಮ-ಹವನ, ರಕ್ತದಾನ ಶಿಬಿರ, ಸಂಗೀತ, ಪ್ರಸಾದ ▸▸3ನೇ ಪುಟಕ್ಕೆ

> ಮುಕ್ತಿಮಂದಿರದಲ್ಲಿ ಸೆ.13ರಂದು ನಡೆಯುವ ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಭೂಮಿಪೂಜಾ ಕಾರ್ಯಕ್ರಮದಲ್ಲಿ ಎಲ್ಲ ಭಕ್ತರೂ ಪಾಲ್ಗೊಳ್ಳಿ. ಪತ್ರಿವರ್ಷ ಶ್ರಾವಣ ಮಾಸದಲ್ಲಿ ನಡೆಯುವ ದುಂಡಿಬಸವೇಶ್ವರ ಜಾತ್ರಾ ಮಹೋತ್ಸವಕ್ಕೆ ಬರುವ ವರ್ಷಗಳಲ್ಲಿ ರಥೋತ್ಸವ ನಡೆಸೋಣ. ಅದಕ್ಕೆ ಭಕ್ತರ ಸಹಾಯ-ಸಹಕಾರ ಅಗತ್ಯವಾಗಿದೆ.
>
> **– ಡಾ. ಕರಿವೃಷಭದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮಿಗಳು.**

---

## ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 12 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ**

ವಾರ್ಡ್ ನಂ. 29 ರಲ್ಲಿ ಮಸೂತಿ ಲೈನ್, ಕೆಳಗಿನ ಭಾಗ ಮೇಲಿನ ಭಾಗ. ವಾರ್ಡ್ ನಂ. 34, 35 ರಲ್ಲಿ ರಾಮನಗರ ಕೆಲವು ಭಾಗಗಳು, ಕೆಇಬಿ ಲೈನ್, ಬಾಪೂಜಿನಗರ, ಲಯನ್ಸ್ ಸ್ಕೂಲ್ ಕೆಲವು ಭಾಗಗಳು, ಸೇವಾಲಾಲ್ ನಗರ, ಅನಿಲ್ ಗರಗರವರ ಲೈನ್, ಅಬ್ಬಿಗೇರಿ ಲೈನ್, ಸರ್ವೋದಯ ಸ್ಕೂಲ್ ಲೈನ್. ವಾರ್ಡ್ ನಂ. 33 ರಲ್ಲಿ ಝುಕೀರ್ ಹುಸೇನ್ ಕಾಲೋನಿ, ಗಣೇಶ್ ಕಾಲೋನಿ, ಗಿರಣಿ ಲೈನ್, ಗಡ್ಡಿಯವರ ಲೈನ್, ಜಯಶ್ರೀ ಪವರ್ ಲೈನ್, ಟೋಪಿವಾಲೆರವರ ಲೈನ್, ಮೇರವಾಡೆ ಲೈನ್, ಸನಾ ಅಪಾರ್ಟ್ಮೆಂಟ್ ಲೈನ್, ಬೆಲ್ಲದ ಬಾಕಳೆ ಲೈನ್, ಸೋನಾಬಾಯಿ ಲೈನ್, ಅಬ್ಬಿಗೇರಿ ಲೈನ್, ಮುಂಡೇವಾಡಿ ಲೈನ್, ಗಾಯಕವಾಡರ ಲೈನ್. ವಾರ್ಡ್ ನಂ. 22 ರಲ್ಲಿ ಗಂಗಿಮಡಿ ದೊಡ್ಡ ಮಸೀದಿ ಲೈನ್, ಬಸ್ ಸ್ಟ್ಯಾಂಡ್ ಲೈನ್, ಹಿಂದಿನ ಲೈನ್ ಮುಂದಿನ ಲೈನ್, 200 ಮನೆ



ಲೈನ್, 1400 ಮನೆ ಲೈನ್, 1600 ಮನೆ ಲೈನ್, 630 ಮನೆ ಲೈನ್, ಅಪಾರ್ಟ್‌ಮೆಂಟ್ ಲೈನ್.

ವಾರ್ಡ್ ನಂ.1 ರಲ್ಲಿ ಎಸ್. ಎಂ. ಕೃಷ್ಣ ನಗರ ಮೇಲಿನ ಲೈನ್ ಕೆಳಗಿನ ಲೈನ್. ವಾರ್ಡ್ ನಂ. 7 ರಲ್ಲಿ ಶಿವಾಜಿನಗರದ ಕೆಲವು ಭಾಗಗಳು ಭಾಗ 1, ಭಾಗ 2, ಭಾಗ 3, ಭಾಗ 4, ಪಂಚಲಕ್ಷ್ಮಿ ಬಡಾವಣೆ ಭಾಗ 1, ಭಾಗ 2, ಭಾಗ 3, ಭಾಗ 4 ಕೆಲವು ಉಳಿದ ಭಾಗಗಳು

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

## 'ಮಹಾತ್ಮಾಗಾಂಧಿ ಸೇವಾ ಪ್ರಶಸ್ತಿ-ಕರ್ನಾಟಕ' ಆಯ್ಕೆಗೆ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ಮಹಾತ್ಮಗಾಂಧಿ ಸೇವಾ ಪ್ರಶಸ್ತಿ-ಕರ್ನಾಟಕಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು. 2023ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಮಹಾತ್ಮಗಾಂಧೀಜಿಯವರು ಪ್ರಚುರಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ▸▸3ನೇ ಪುಟಕ್ಕೆ

---

### 'ಗದಗ ಉತ್ಸವ'ದಲ್ಲಿ ಜೀವಮಾನ ಸಾಧನೆ, ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ

## ದೇಶದ ಪ್ರಗತಿಯಲ್ಲಿ ಕೈಗಾರಿಕೆಗಳ ಪಾತ್ರವೂ ಇದೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕೈಗಾರಿಕೆಗಳ ಸ್ಥಾಪನೆ, ಕೈಗಾರಿಕೋದ್ಯಮಿಗಳನ್ನು ಪ್ರೋತ್ಸಾಹಿಸುವ ಕಾರ್ಯ ಆಗಬೇಕಿದೆ. ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಕೈಗಾರಿಕೆಗಳ ಟೌನ್‌ಶಿಪ್‌ಗಳು ಬೆಳವಣಿಗೆ ಆಗಬೇಕು. ಅಂದಾಗ ಮಾತ್ರ ಪ್ರಗತಿ ಹೊಂದಿ, ನಿರುದ್ಯೋಗ ನಿವಾರಿಸಲು ಸಾಧ್ಯ ಎಂದು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆಯ ಅಧ್ಯಕ್ಷ ಬಿ.ವ್ಹಿ ಗೋಪಾಲರಡ್ಡಿ ಹೇಳಿದರು.

ಅವರು ರವಿವಾರ ಗದುಗಿನ ತೋಂಟದ ಸಿದ್ಧಲಿಂಗೇಶ್ವರ ಕಲ್ಯಾಣ ಕೇಂದ್ರದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ ಹಾಗೂ ಗದಗ ಜಿ.ಪಂ ಆಶ್ರಯದಲ್ಲಿ ನಡೆದ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟದ 'ಗದಗ ಉತ್ಸವ'ದಲ್ಲಿ ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ದೇಶದ ಪ್ರಗತಿಗೆ ಕೈಗಾರಿಕೆಗಳು ಪ್ರಮುಖ ಪಾತ್ರ ವಹಿಸುತ್ತವೆ. ಆದರೆ ಕೈಗಾರಿಕೆಗಳು ನಿರೀಕ್ಷೆಯಂತೆ ಪ್ರಗತಿಯಾಗದ ಕಾರಣದಿಂದಾಗಿ ದೇಶದ ಪ್ರಗತಿಗೆ ▸▸3ನೇ ಪುಟಕ್ಕೆ




> ಕೈಗಾರಿಕೆ ಮತ್ತು ಕೈಗಾರಿಕೋದ್ಯಮಿಗಳನ್ನು ಉತ್ತೇಜಿಸಲು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯು ಪ್ರತಿ ವರ್ಷ ಗದಗ ಉತ್ಸವ ನಡೆಸಿ ಪ್ರೋತ್ಸಾಹಿಸುತ್ತಿರುವದು ಅಭಿನಂದನೀಯ. ಸರಕಾರದಿಂದ ಆಗಬೇಕಿದ್ದ ಇಂತಹ ಕಾರ್ಯವನ್ನು ಸಂಸ್ಥೆಯೊಂದು ನಡೆಸಿಕೊಂಡು ಬಂದಿರುವದು ಶ್ಲಾಘನೀಯ. ಜೀವಮಾನ ಸಾಧನೆ, ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ನೀಡಿ ಉತ್ತೇಜಿಸುವ ಮೂಲಕ ಯುವ ಉದ್ದಿಮೆದಾರರಿಗೆ ಪ್ರೇರಣೆ ನೀಡುತ್ತಿರುವದು ಸ್ವಾಗತಾರ್ಹ.
>
> **– ಬಿ.ವ್ಹಿ ಗೋಪಾಲರಡ್ಡಿ.**
> ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆಯ ಅಧ್ಯಕ್ಷರು.

## ಸಾಕ್ಷಿ ಸುಭಾಷಿತ

ಜನತಂತ್ರ ರಕ್ಷಣೆಗೆ ಜನರಲ್ಲಿ ಅಪಾರವಾದ ಸ್ವಾತಂತ್ರ್ಯ, ಆತ್ಮಗೌರವ ಮತ್ತು ಏಕತೆಯ ಭಾವ ಇರಬೇಕು

–ಸುಭಾಷಿತ

## ಸಂಪಾದಕೀಯ

# ಮನೆ ಬಾಗಿಲಿಗೆ ಬರಲಿ ಆರೋಗ್ಯ

ಪಂಚ ಗ್ಯಾರಂಟಿ ಕಾರ್ಯಕ್ರಮದ ಮೂಲಕ ಗಮನ ಸೆಳೆದಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಈಗ ಆರೋಗ್ಯ ಭಾಗ್ಯ ಒಂದನ್ನ ನೀಡಲು ಸಿದ್ಧತೆ ಮಾಡಿಕೊಳ್ಳುತ್ತಿದೆ.

ಮನೆ ಬಾಗಿಲಿಗೆ ಆರೋಗ್ಯ ಭಾಗ್ಯ ಎನ್ನುವ ಕಾರ್ಯಕ್ರಮವನ್ನು ರೂಪಿಸಿಕೊಂಡಿದ್ದು ಸಚಿವ ಸಂಪುಟದ ಅನುಮೋದನೆಗಾಗಿ ಕಾಯುತ್ತಿದೆ.

ಮನೆ ಮನೆಗೆ ಆರೋಗ್ಯ ಕಾರ್ಯಕ್ರಮಕ್ಕೆ ಅನುಮೋದನೆ ದೊರೆತಲ್ಲಿ, ಬಡವರಿಗೆ ಸಾಕಷ್ಟು ಅನುಕೂಲವಾಗಲಿದೆ. ಮನೆ ಬಾಗಿಲಿಗೆ ಆರೋಗ್ಯ ಸೇವೆ ದೊರೆಯುಂತಾದರೆ ಜನರಿಗೆ ನಿಜವಾಗಿಯೂ ಭಾಗ್ಯವೇ ದೊರೆತಂತೆ.

ಎಲ್ಲವೂ ರಾಜ್ಯ ಸರ್ಕಾರ ಅಂದುಕೊಂಡಂತೆ ಯೋಜನೆಯನ್ನು ಜಾರಿಗೊಳಿಸಿದರೆ, ಐದು ಗ್ಯಾರಂಟಿಗಳಿಗಿಂತ ಈ ಆರೋಗ್ಯ ಭಾಗ್ಯ ಒದಗಿಸುವ ಗ್ಯಾರಂಟಿ ಜನರಿಗೆ ಅತ್ಯಂತ ಪ್ರಿಯವಾಗಲಿದೆ. ಲಕ್ಷಾಂತರ ಬಡವರು ಸರ್ಕಾರವನ್ನು ನಿಜವಾಗಿಯೂ ಶ್ಲಾಘಿಸಲಿದ್ದಾರೆ.

ಅಸಲಿಗೆ ರಾಜ್ಯದ ಜನರಿಗೆ ಮಾತ್ರವಲ್ಲ ಇಡೀ ದೇಶದ ಜನರಿಗೆ ಇಂತಹ ಆರೋಗ್ಯ ಭಾಗ್ಯದ ಅವಶ್ಯಕತೆಯಿದೆ. ಉಚಿತ ಕೊಡುಗೆಗಳಿಗಿಂತ ಅರೋಗ್ಯ ಸೇವೆ ನೀಡುವ ಖಚಿತ ಕೊಡುಗೆಗಳು ಅವಶ್ಯವಾಗಿದೆ.

ಉಚಿತ ಶಿಕ್ಷಣ ಮತ್ತು ಉಚಿತ ಆರೋಗ್ಯ ಸೇವೆ ಎರಡು ಯೋಜನೆಗಳನ್ನು ಅತ್ಯಂತ ಪರಿಣಾಮಕಾರಿ ಮತ್ತು ಅತ್ಯುನ್ನತ ಗುಣಮಟ್ಟದ ಸೇವೆ ನೀಡಿದಲ್ಲಿ ಯಾವುದೇ ಗ್ಯಾರಂಟಿ ಕಾರ್ಯಕ್ರಮ ಅಗತ್ಯವಿಲ್ಲ. ಕರ್ನಾಟಕದ ಮಟ್ಟಿಗಾದರೂ ಭವಿಷ್ಯದಲ್ಲಿ ಇವೆರಡೂ ಸಿಗುವಂತಾದರೆ ಮಾತ್ರ ಬಡವರ ಬದುಕಿನಲ್ಲಿ ಬದಲಾವಣೆ ತರಲು ಸಾಧ್ಯ. ಆದರೆ ಇಂದಿನ ಪರಿಸ್ಥಿತಿಯಲ್ಲಿ ಅದು ಸಾಧ್ಯವಿಲ್ಲ ಎನ್ನುವ ಅರಿವೂ ಇದೆ. ಏನೇ ಆಗಲಿ ಬಡವರ ಮನೆ ಬಾಗಿಲಿಗೆ ಆರೋಗ್ಯ ಸೇವೆ ದೊರೆಯುವಂತಾಗಲಿ. ಈ ಹಿಂದಿನ ಬಿಜೆಪಿ ಸರಕಾರ ಜಾರಿಗೆ ತಂದಿದ್ದ ನಮ್ಮ ಕ್ಲಿನಿಕ್‌ಗಳ ಬಗ್ಗೆಯೂ ಕಾಂಗ್ರೆಸ್ ಸರಕಾರ ಗಮನ ಹರಿಸಲಿ. ಆರೋಗ್ಯ ಸೇವೆ ನೀಡುವ ಯಾವುದೇ ಕಾರ್ಯಕ್ರಮ ತಡೆಯಿಲ್ಲದಂತೆ ನಿತ್ಯ ನಿರಂತರವಾಗಿ ಸಿಗಲಿ.

# ವಿಶ್ವಕರ್ಮ ಜಯಂತಿ ಅಂಗವಾಗಿ ವಿವಿಧ ಸ್ಪರ್ಧೆಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ಸೆಪ್ಟೆಂಬರ್ 17ರಂದು ಜರುಗಲಿರುವ 'ವಿಶ್ವಕರ್ಮ ಜಯಂತಿ ಉತ್ಸವ' ನಿಮಿತ್ತ ಸಮಾಜದ ವಿದ್ಯಾರ್ಥಿಗಳು ಹಾಗೂ ಮಹಿಳೆಯರಿಗಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

5ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ಶ್ರೀಮೌನೇಶ್ವರ, ಶ್ರೀವಿಶ್ವಕರ್ಮ ಅಥವಾ ವಿಶ್ವಕರ್ಮರ ಪಂಚ ಕುಲಕಸಬುಗಳ ಪರಂಪರೆ ಬಿಂಬಿಸುವ ಚಿತ್ರಗಳ ಚಿತ್ರಕಲಾ ಸ್ಪರ್ಧೆ ಹಮ್ಮಿಕೊಳ್ಳಲಾಗಿದ್ದು, ಸ್ಪರ್ಧೆಗೆ ಬೇಕಾಗುವ ಸಾಮಗ್ರಿಗಳನ್ನು ಸ್ಪರ್ಧಾಳುಗಳೇ ತರಬೇಕು. ಡ್ರಾಯಿಂಗ್ ಹಾಳೆಗಳನ್ನು ಮಾತ್ರ ನೀಡಲಾಗುವುದು.

ಪದವಿಪೂರ್ವ ಹಾಗೂ ಮೇಲ್ಪಟ್ಟ ತರಗತಿ ವಿದ್ಯಾರ್ಥಿಗಳಿಗಾಗಿ ವಿಶ್ವಕರ್ಮ ಪಂಚ ವೃತ್ತಿ ಕೌಶಲ್ಯಗಳು ಕನ್ನಡ ಮತ್ತು ಇಂಗ್ಲೀಷ್ ಎರಡು ಭಾಷೆಗಳಲ್ಲಿ ಬರೆಯಲು ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದೆ.

15 ವರ್ಷಗಳ ಮೇಲ್ಪಟ್ಟ ಮಹಿಳೆಯರಿಗಾಗಿ ಶ್ರೀವಿಶ್ವಕರ್ಮ ಹಾಗೂ ಶ್ರೀ ಮೌನೇಶ್ವರರ ಭಕ್ತಿಗೀತೆಗಳ ಮತ್ತು ಭಾವಗೀತೆಗಳ ಸ್ಪರ್ಧೆ ನಡೆಯಲಿದ್ದು, ಈ ಮೇಲಿನ ಎಲ್ಲ ಸ್ಪರ್ಧೆಗಳಲ್ಲಿ ಭಾಗವಹಿಸಲು ಇಚ್ಛಿಸುವವರು ಸೆ.12ರ ಒಳಗಾಗಿ ತಮ್ಮ ಹೆಸರುಗಳನ್ನು ಡಾ. ಸಿ.ವಿ ಬಡಿಗೇರ–9945969888, ಪ್ರೊ. ಎಸ್.ವಿ ಗುಂಜಾಳ–9986103685, ಮಹೇಶ ಪತ್ತಾರ–9945362070, ಶಂಕರಾಚಾರ್ಯ ಕಂಚಗಾರ–9035803821, ರವಿ ಬಡಿಗೇರ–9343260061 ಇವರನ್ನು ಸಂಪರ್ಕಿಸಬೇಕು.

ವಿಜೇತರಾದ ಮೂರು ಸ್ಥಾನಗಳಿಗೆ ವಿಶೇಷ ಬಹುಮಾನ ಹಾಗೂ ಭಾಗವಹಿಸಿದ ಎಲ್ಲರಿಗೂ ಸಮಾಧಾನಕರ ಬಹುಮಾನ ಮತ್ತು ಪ್ರಮಾಣ ಪತ್ರ ನೀಡಲಾಗುವುದು. ಸ್ಪರ್ಧೆ ನಡೆಯುವ ದಿನದಂದು ಬೆಳಗ್ಗೆ 10 ಗಂಟೆಗೆ ಶ್ರೀ ವಿಶ್ವಕರ್ಮ ಭವನಕ್ಕೆ ಆಗಮಿಸಬೇಕು ಎಂದು ಅಧ್ಯಕ್ಷ ಆರ್.ಡಿ ಕಡ್ಲಿಕೊಪ್ಪ ಹಾಗೂ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಕಮ್ಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಂಜಪ್ಪನವರಿಗೆ ಆದರ್ಶ ಶಿಕ್ಷಕ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಶ್ರೀಮತಿ ಪಾರ್ವತೆವ್ವ ಕೋಂ ಹಿರೇಬಸಪ್ಪ ಹಳೆಮನೆ ಸರ್ಕಾರಿ ಪ್ರೌಢಶಾಲೆಯ ಆಂಗ್ಲ ಭಾಷೆಯ ಶಿಕ್ಷಕರಾದ ಮಂಜಪ್ಪನವರು ತಾಲೂಕಿನ ಆದರ್ಶ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಶಾಸಕರಾದ ಜಿ.ಎಸ್ ಪಾಟೀಲ್ ಹಾಗೂ ಡಾ. ಚಂದ್ರ ಲಮಾಣಿಯವರು ಗುರು ನಮನ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷರಾದ ಚನ್ನಪ್ಪ ಈರಪ್ಪ ಹೊಳೆಯಾಚೆವರು, ಭೂದಾನಿಗಳಾದ ಮಲ್ಲನಗೌಡ ಹಳೇಮನಿ, ಮುಖ್ಯೋಪಾಧ್ಯಾಯರು, ಸಿಬ್ಬಂದಿ ವರ್ಗ ಹಾಗೂ ಊರಿನ ಎಲ್ಲ ಗುರು–ಹಿರಿಯರು, ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.


## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

E-mail: vijayasakshidaily@gmail.com

ಮೊ : 9019256545


## ರಾಜ್ಯದ ಕಾನೂನು ವಿಶ್ವವಿದ್ಯಾಲಯಕ್ಕೆ ಸಿದ್ದಪ್ಪ ಕಂಬಳಿ ಹೆಸರಿಡಲು ಬಸವರಾಜ ಹೊರಟ್ಟಿ ಆಗ್ರಹ

# ಸಿದ್ದಪ್ಪರಂತಹ ಶ್ರೇಷ್ಠ ನಾಯಕನನ್ನು ಪಡೆದ ನಾವು ಧನ್ಯ

■ ವಿಜಯಸಾಕ್ಷಿ ಸುದ್ದಿ, ಗದಗ


ರಾಜ್ಯದಲ್ಲಿರುವ ಕಾನೂನು ವಿಶ್ವವಿದ್ಯಾಲಯಕ್ಕೆ ಸರ್ ಸಿದ್ದಪ್ಪ ಕಂಬಳಿಯವರ ಹೆಸರನ್ನು ಇಡಬೇಕೆಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಸರಕಾರವನ್ನು ಆಗ್ರಹಿಸಿದ್ದಾರೆ. ಸಮಾಜ ಬದಲಾವಣೆಯ ಪ್ರಮುಖ ಹರಿಕಾರರಾಗಿರುವ ಸರ್ ಸಿದ್ದಪ್ಪ ಕಂಬಳಿಯವರ ಜನ್ಮ ದಿನೋತ್ಸವಕ್ಕೆ ಶುಭ ಹಾರೈಕೆ ಸಲ್ಲಿಸುವ ಸಂದರ್ಭದಲ್ಲಿ ಅವರು ಈ ಆಗ್ರಹವನ್ನು ಮಾಡಿದ್ದಾರೆ.

ಸೆ.11ರಂದು ಸರ್ ಸಿದ್ದಪ್ಪ ಕಂಬಳಿಯವರ 141ನೆ ಜನ್ಮ ದಿನೋತ್ಸವ ಆಚರಿಸಲಾಗುತ್ತಿದೆ. ಪ್ರತಿ ವರ್ಷ ಹುಬ್ಬಳ್ಳಿಯಲ್ಲಿ ಆಚರಿಸುವ ಅವರ ಜನ್ಮ ದಿನೋತ್ಸವದಲ್ಲಿ ನಾನು ತಪ್ಪದೇ ಭಾಗವಹಿಸುತ್ತಿದ್ದೆ. ಆದರೆ ಅನಿವಾರ್ಯ ಕಾರಣಗಳಿಂದ, ನಾನು ದೆಹಲಿಗೆ ಬಂದಿರುವುದರಿಂದ ಈ ಸಾರೆ ಕಾರ್ಯಕ್ರಮದಲ್ಲಿ ಭಾಗವಹಿಸಲು



ಸಾಧ್ಯವಾಗದೆ ಇರುವುದು ನನಗೆ ಅತೀವ ನೋವನ್ನುಂಟು ಮಾಡಿದೆ.

ದೈಹಿಕವಾಗಿ ನಾನು ದೆಹಲಿಯಲ್ಲಿದ್ದರೂ, ಕಾರ್ಯಕ್ರಮದ ಸಂಘಟಕರೊಡನೆ



ಮಾನಸಿಕವಾಗಿ ಇದ್ದೇನೆ ಎಂದು ಹೊರಟ್ಟಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ ಎಂದು ಅವ್ವ ಸೇವಾ ಟ್ರಸ್ಟ್‌ನ ಸಂಚಾಲಕ ಡಾ. ಬಸವರಾಜ ಧಾರವಾಡ ತಿಳಿಸಿದ್ದಾರೆ.

> 1924ರಲ್ಲಿ ಬೆಳಗಾವಿಯಲ್ಲಿ ನಡೆದ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಸಮ್ಮೇಳನದಲ್ಲಿ ಖುದ್ದಾಗಿ ಗಾಂಧಿಯವರೇ ಸರ್ ಸಿದ್ದಪ್ಪ ಕಂಬಳಿಯವರನ್ನು ಕರೆಯಿಸಿಕೊಂಡು ಅವರೊಂದಿಗೆ ಸಮಾಲೋಚನೆ ಮಾಡಿದರೆಂದ ಮೇಲೆ, ಅವರ ಕರ್ತೃತ್ವ ಶಕ್ತಿ ಹೇಗಿತ್ತು ಎಂಬುದು ತಿಳಿಯುತ್ತದೆ. ಇಂತಹ ಶ್ರೇಷ್ಠ ನಾಯಕನನ್ನು ಪಡೆದ ನಾವು ಧನ್ಯರು. ಇದು ಕನ್ನಡಿಗರೆಲ್ಲರೂ ಹೆಮ್ಮೆ ಪಡಬೇಕಾದ ವಿಷಯ. ಅವರ ಬಗ್ಗೆ ಮಾತನಾಡುವುದು, ಅವರನ್ನು ಗೌರವಿಸುವುದು ಎಂದಿಗೂ ಅಭಿಮಾನದ ಸಂಗತಿಯಾಗಿದೆ ಎಂದು ಸಭಾಪತಿ ಹೊರಟ್ಟಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಕಾನೂನು ವಿಶ್ವವಿದ್ಯಾಲಯಕ್ಕೆ ಸರ್ ಸಿದ್ದಪ್ಪ ಕಂಬಳಿಯವರ ಹೆಸರನ್ನು ಇಡುವಂತೆ ತಾವು ಸರಕಾರದ ಮಟ್ಟದಲ್ಲಿಯೂ ಪ್ರಯತ್ನ ನಡೆಸುವುದಾಗಿ ಹೊರಟ್ಟಿ ತಿಳಿಸಿದ್ದಾರೆ. ಸರ್ ಸಿದ್ದಪ್ಪ ಕಂಬಳಿಯವರು ಮುಂಬೈ ಸರಕಾರದಲ್ಲಿ ಮಂತ್ರಿಗಳಾಗಿದ್ದು, ಸಪ್ತ ಖಾತೆಗಳನ್ನು ನಿರ್ವಹಿಸಿದ ಅನುಭವ ಅವರಿಗಿದೆ. ಅವರು ಒಬ್ಬ ಶ್ರೇಷ್ಠ ನಾಯಕರು. ಅವರ ಕಾರ್ಯ ದಕ್ಷತೆಗೆ ಯಾರೂ ಹೆಸರಿಡುವಂತಿಲ್ಲ.

ಬ್ರಿಟಿಷ್ ಸರಕಾರ ಅವರ ಕಾರ್ಯ ವೈಖರಿ ಮತ್ತು ದಕ್ಷತೆಯನ್ನು ನೋಡಿಯೇ ಅವರಿಗೆ ಸರ್ ಪದವಿಯನ್ನು ನೀಡಿ ಗೌರವಿಸಿದೆ. ಮಹಾತ್ಮಾ ಗಾಂಧಿಯವರನ್ನು ನೋಡಲು ಲಕ್ಷಾಂತರ ದೇಶಾಭಿಮಾನಿಗಳು ಕಾಯುತ್ತಿದ್ದರೆ, ಸ್ವತಃ ಗಾಂಧೀಜಿಯವರು ಸರ್ ಸಿದ್ದಪ್ಪ ಕಂಬಳಿಯವರನ್ನು ನೋಡಲು ಕಾತುರರಾಗಿದ್ದರು ಎಂಬುದು ಕಂಬಳಿಯವರ ಹೆಚ್ಚುಗಾರಿಕೆಗೆ ಸಾಕ್ಷಿಯಾಗಿದೆ ಎಂದಿದ್ದಾರೆ.

# ಕರುನಾಡು ಶರಣರ ಪುಣ್ಯಮಯ ಕ್ಷೇತ್ರವಾಗಿತ್ತು

■ ವಿಜಯಸಾಕ್ಷಿ ಸುದ್ದಿ, ಗದಗ

ವಚನ ಸಾಹಿತ್ಯಕ್ಕೆ ಬಸವಾದಿ ಶರಣರ ಕೊಡುಗೆ ಅನನ್ಯ ಮತ್ತು ಶ್ರೇಷ್ಠವಾಗಿದೆ. ಕರ್ನಾಟಕದ ನೆಲವು ಶರಣರ ಪುಣ್ಯಮಯವಾದ ಪವಿತ್ರ ಕ್ಷೇತ್ರವಾಗಿತ್ತು ಎಂದು ಶರಣೆ ರೇಣುಕಾ ಕರೇಗೌಡ್ರ ಹೇಳಿದರು.

ಅವರು ಒಕ್ಕಲಗೇರಿ ಓಣಿಯ ಶರಣ ಸಿದ್ದಲಿಂಗಪ್ಪ ಶಾಂತಪ್ಪ ಭೂಮಾ ಇವರ ನಿವಾಸದಲ್ಲಿ ನಡೆದ ವಚನ ಶ್ರಾವಣದ 21ನೇ ದಿನದ ಅಂಗವಾಗಿ ಉಪನ್ಯಾಸ ನೀಡಿದರು.



ಸಭೆಯಲ್ಲಿ ಪ್ರಕಾಶ್ ಅಸುಂಡಿ, ನಾಗರತ್ನ ಅಸುಂಡಿ, ಬಿ.ವಿ ಕಾಮಣ್ಣವರ, ಮಂಗಳಕ್ಕ ಕಾಮಣ್ಣವರ, ಚನ್ನಬಸವಣ್ಣ ಕಾಮಣ್ಣವರ, ದೀಪಾ ನೀಲೂಗಲ್ಲ, ಮಂಜುಳಾ ಹಾಸಲಕರ, ವಿ.ಕೆ ಕರೇಗೌಡ್ರ, ಎಸ್.ಎನ್ ಹಕಾರಿ, ಮಂಜುನಾಥ ಲಾಲಗೊಂಡ, ಲೀಲಾವತಿ ಬಳ್ಳೊಳ್ಳಿ, ಶಾಂತವೀರ ನಾಯಿನೇಗಲಿ, ಜ್ಯೋತಿ ವಾಲಿ, ಸಿ.ಆರ್ ಗಡಾದ, ಚನ್ನಬಸಪ್ಪ ಅಂಗಡಿ, ಈರಣ್ಣ ಹೊನ್ನಗಣ್ಣವರ, ನಾಗಭೂಷಣ ಬಡಿಗಣ್ಣವರ, ಗೌರಕ್ಕ ಬಡಿಗಣ್ಣವರ, ಅಲ್ಲಮಪ್ರಭು ಬಡಿಗಣ್ಣವರ, ನೀಲಕ್ಕ ಮರಳಿ, ಸುರೇಶ್ ನೀಲೂಗಲ್ಲ, ರೂಪಕ್ಕ, ಮಹೇಶ್ವರಿ, ಪೂಜಾ, ಶ್ವೇತಾ, ವೈಷ್ಣವಿ, ಮಂಜುಳಾ ಮಡಿವಾಳರ, ಸುಧಾ ಬೆಲ್ಲದ, ವಿ.ಜಿ ನೀಲೂಗಲ್ಲ, ವಿಜಯಲಕ್ಷ್ಮೀ ಗಡಕಿ, ಕೀರ್ತಿ ಗಾಡದ, ರೇಖಾ ಯಾಳಗಿಶೆಟ್ಟರ, ಶೋಭಾ ಕುಲಕರ್ಣಿ, ಕಸ್ತೂರಿ ಮಾನ್ವಿ, ಶ್ವೇತಾ ಬೆಲ್ಲದ, ಗಂಗಮ್ಮ, ಶ್ರೀದೇವಿ ಮಾನ್ವಿ, ಸಿದ್ದಲಿಂಗಪ್ಪ ಭೂಮಾ, ಕಮಲಾ ಭೂಮಾ, ವಿಜಯಕುಮಾರ್ ಭೂಮಾ, ಶಾಂತಕುಮಾರ್ ಭೂಮಾ, ಗಂಗಮ್ಮ ಉದ್ಯೋಗಣ್ಣವರ, ಮಂಗಳಕ್ಕ ನಾಲ್ವಾಡ ಮುಂತಾದವರಿದ್ದರು.

ಕಮಲಾ ಭೂಮಾ ಸ್ವಾಗತಿಸಿದರು. ಮಂಗಳಕ್ಕ ಕಾಮಣ್ಣರವ ನಿರೂಪಿಸಿದರು.

# ಬಾಯಿಯ ಶುಚಿತ್ವ ಕಾಪಾಡಿಕೊಳ್ಳಿ: ಡಾ.ಪ್ರವೀಣ ಸಜ್ಜನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹೊಟ್ಟೆಯ ಆರೋಗ್ಯ ಬಾಯಿಯ ಸ್ವಚ್ಛತೆಯನ್ನು ಅವಲಂಬಿಸಿದೆ. ಬಾಯಿ ಅಥವಾ ಹಲ್ಲು ಪರೋಕ್ಷವಾಗಿ ದೇಹದ ಆರೋಗ್ಯಕ್ಕೆ ಮೂಲವಾಗಿದ್ದು, ಬಾಯಿಯ ಶುಚಿತ್ವದ ಬಗ್ಗೆ ಪ್ರತಿಯೊಬ್ಬರೂ ಜಾಗೃತೆ ವಹಿಸಬೇಕು ಎಂದು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ದಂತ ವೈದ್ಯ ಡಾ.ಪ್ರವೀಣ ಸಜ್ಜನ ಹೇಳಿದರು.

ಅವರು ಸಮೀಪದ ಶಿಗ್ಲಿ ಗ್ರಾಮದಲ್ಲಿ ರಾಷ್ಟ್ರೀಯ ಬಾಯಿ ಆರೋಗ್ಯ ಹಾಗೂ ದಂತ ಭಾಗ್ಯ ಯೋಜನೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮುಖ್ಯವಾಗಿ ಧೂಮಪಾನ ಮತ್ತು ಸಕ್ಕರೆ ಖಾಯಿಲೆ ಬಾಯಿಯ ಸಮಸ್ಯೆಗಳನ್ನು ಮತ್ತಷ್ಟು ಉಲ್ಬಣಗೊಳಿಸುತ್ತದೆ. ಸರಿಯಾದ ಬಾಯಿ ಶುಚಿತ್ವವನ್ನು ಕಾಪಾಡಿಕೊಳ್ಳುವುದು ಬಾಯಿಯ ಕ್ಯಾನ್ಸರ್ ಸೇರಿದಂತೆ ಇತರೆ ಸಮಸ್ಯೆಗಳನ್ನು ನಿಗ್ರಹಿಸಲು



ನೆರವಾಗುತ್ತದೆ. ಹುಳುಕು ಹಲ್ಲು, ಕಪ್ಪು ಕಲೆ, ಊತ ಕಾಣಿಸಿಕೊಳ್ಳುವದು ಮುಂತಾದ ಹಲ್ಲಿನ ಹಾಗೂ ಬಾಯಿಯ ಸಮಸ್ಯೆಗಳಿಗೆ ದಂತ ವೈದ್ಯರನ್ನು ಸಂಪರ್ಕಿಸಿ ನಿವಾರಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಡಾ.ಧರ್ಮೆಂದ್ರ ಎನ್.ಎಸ್ ಮಾತನಾಡಿ, ಕೇಂದ್ರ ಸರಕಾರ 2020ರಲ್ಲಿ ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮ ಜಾರಿಗೆ ತಂದಿದ್ದು, ಅದರಂತೆ ದಂತಭಾಗ್ಯ ಯೋಜನೆ ಜಾರಿಗೊಳಿಸಿದೆ. ಬಿಪಿಎಲ್ ಕಾರ್ಡುದಾರರು ಇದರ ಪ್ರಯೋಜನ ಪಡೆದುಕೊಳ್ಳುವದರ ಜೊತೆಗೆ ಬಾಯಿ ಮತ್ತು ಹಲ್ಲುಗಳ ಆರೋಗ್ಯಕ್ಕೆ ವಿಶೇಷ ಕಾಳಜಿ ನೀಡಬೇಕು ಎಂದರು.

ಅತಿಥಿಗಳಾಗಿ ಡಾ.ಮಲ್ಲಿಕಾರ್ಜುನ ಕುಂಬಾರ, ಡಾ.ಲಿಂಗರಾಜ ಬಾಳಿಹಳ್ಳಿಮಠ, ಡಾ.ಸೌಭಾಗ್ಯಲಕ್ಷ್ಮೀ ಭಾಗವಹಿಸಿದ್ದರು. ಜಿ.ಬಿ ಬಣಗಾರ ಸ್ವಾಗತಿಸಿದರು. ಗೀತಾ ನಿರೂಪಿಸಿದರು. ಬಿ.ಎಸ್ ಹಿರೇಮಠ ವಂದಿಸಿದರು.

# ಭಾವೈಕ್ಯತೆಗೆ ಸಾಕ್ಷಿಯಾದ ಶ್ರೀಕೃಷ್ಣ ಜನ್ಮಾಷ್ಟಮಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರೀಕೃಷ್ಣ ಲೀಲೆಗಳಿಗೆ ಮಾರು ಹೋಗದವರೇ ಇಲ್ಲ. ಶ್ರೀಕೃಷ್ಣ ನಮ್ಮ ನಿತ್ಯ ಜೀವನದ ಎಲ್ಲ ಸಮಸ್ಯೆಗಳಿಗೂ ಉತ್ತರ ನೀಡಿದ್ದಾನೆ. ಅರ್ಜುನನನ್ನು ಸಾಧನವಾಗಿಸಿಕೊಂಡು ಆತ ಬೋಧಿಸಿದ ಭಗವದ್ಗೀತೆ ಸರ್ವ ಕಾಲಕ್ಕೂ ಉಪಯುಕ್ತವಾಗುವ ಗ್ರಂಥವಾಗಿದ್ದು, ಅದು ಎಲ್ಲ ರೀತಿಯ ಸಮಸ್ಯೆಗಳಿಗೆ ಸಮಾಧಾನವನ್ನು ನೀಡುತ್ತದೆ ಎಂದು ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಸಹೋದರಿ ಬಿ.ಕೆ ಸವಿತಕ್ಕನವರು ನುಡಿದರು.



ಪಟ್ಟಣದ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಈಚೆಗೆ ಆಚರಿಸಲಾದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮವು ಭಾವೈಕ್ಯತೆಗೆ ಸಾಕ್ಷಿಯಾಯಿತು. ಶ್ರೀ ಕೃಷ್ಣನ ವೇಷ ತೊಟ್ಟಿದ್ದ ಚಿಣ್ಣರು ಬಗೆ ಬಗೆಯಲ್ಲಿ ಶ್ರೀಕೃಷ್ಣನ ರೂಪವನ್ನು ಪ್ರದರ್ಶಿಸಿದರು. ರಾಧೆಯ ವೇಷ ಧರಿಸಿದ್ದ ಬಾಲಕಿಯರು, ಪೋಷಕರು ಧರ್ಮಾತೀತವಾಗಿ ಭಾಗವಹಿಸಿ ಸಂಭ್ರಮಿಸಿದರು. ಎಲ್ಲ ಧರ್ಮಗಳ ಮಕ್ಕಳೂ ಇಲ್ಲಿ ಶ್ರೀ ಕೃಷ್ಣನ ವೇಷ ಧರಿಸಿ ನರ್ತನ ಮಾಡಿದ್ದು, ಬಹುಮಾನಗಳನ್ನು ಪಡೆದರು. ಈ ಕಾರ್ಯಕ್ರಮದ ಅಂಗವಾಗಿ ಮಕ್ಕಳಿಗೆ ಶ್ರೀಕೃಷ್ಣ, ರಾಧೆಯ ವೇಷಭೂಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು, ಸುಮಾರು 35ಕ್ಕೂ ಹೆಚ್ಚು ಮಕ್ಕಳು ಇದರಲ್ಲಿ ಭಾಗವಹಿಸಿದ್ದರು. ಕು. ತನುಜಾ ಜಕ್ಕಲಿ ಪ್ರಥಮ, ಕು. ವರ್ಷಿಣಿ ಕಡಿಯವರ ದ್ವಿತೀಯ, ಕು. ದೀಪ್ತಿ ಕಳಕೊಣ್ಣವರ ತೃತೀಯ ಬಹುಮಾನವನ್ನು ಪಡೆದರು. ಉಳಿದ ಎಲ್ಲ ಮಕ್ಕಳಿಗೆ ಉಡುಗೊರೆಯನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಎಂ.ಎಸ್ ಪೂಜಾರ, ಶಿಕ್ಷಕರಾದ ಕೆ.ವಿ ಕಟ್ಟಿ, ಶಿವಪ್ಪ ಧರ್ಮಾಯತ, ಶರಣಪ್ಪ ಹೊಸಮನಿ, ರವಿ ದೇವರಡ್ಡಿ, ಬಸವರಾಜ ಧರ್ಮಾಯತ ಮುಂತಾದವರಿದ್ದರು. ಬಸವಂತಪ್ಪ ಬಳಿಗಾರ, ಪ್ರಕಾಶ ಅಯ್ಯನಗೌಡ್ರ ನಿರ್ಣಾಯಕರಾಗಿದ್ದರು. ಬಿ.ಕೆ ಸವಿತಕ್ಕನವರ ಸ್ವಾಗತಿಸಿ, ನಿರೂಪಿಸಿದರು.

# ಪೋಷಣ್ ಮಾಸಾಚರಣೆ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ನರಗುಂದ

ಶಿಶು ಅಭಿವೃದ್ಧಿ ಯೋಜನೆ ನರಗುಂದ ವತಿಯಿಂದ 129ನೇ ಅಂಗನವಾಡಿ ಕೇಂದ್ರದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದ ಅದ್ಯಕ್ಷತೆಯನ್ನು ಹಿರಿಯರಾದ ಎಮ್.ಆರ್ ಕಾಳೆ ವಹಿಸಿದ್ದರು.

ಮೇಲ್ವಿಚಾರಕಿ ಜಯಶ್ರೀ ಅಂಗಡಿ ಮಾತನಾಡಿ ಪೌಷ್ಠಿಕ ಅಹಾರವು ಇತ್ತೀಚಿನ ದಿನಗಳಲ್ಲಿ ಪ್ರಾಮುಖ್ಯತೆ ಪಡೆದಿದ್ದು, ಅದರ ಸದುಪಯೋಗವನ್ನು ಮಕ್ಕಳು, ಕಿಶೋರಿಯರು, ಗರ್ಭಿಣಿಯರು, ತಾಯಂದಿರು ಪಡೆಯಲು ತಿಳಿಸಿದರು.

ಶಿಶು ಅಭಿವೃಜಜಿಅ ಯೋಜನಾಧಿಕಾರಿ ರೂಪಾ ಗಂಧದ ಮಾತನಾಡಿ, ಪೌಷ್ಠಿಕ ಆಹಾರದ ಜೊತೆ ಜೊತೆಗೆ ಆರೋಗ್ಯದ ಬಗ್ಗೆ, ವಯಕ್ತಿಕ ಸ್ವಚ್ಚತೆ ಬಗ್ಗೆ ಕಾಳಜಿ ವಹಿಸಿ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಪೌಷ್ಠಿಕತೆ ಹೋಗಲಾಡಿಸಲು ಹಲವಾರು ಯೋಜನೆಗಳನ್ನು ಜಾರಿ ಮಾಡಿದ್ದು, ಸದರಿ ಯೋಜನೆಗಳ ಸದುಪಯೋಗಕ್ಕೆ ಮುಂದಾಗಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗಣಪತಿ ಮಾನೆ, ಮಹಾದೇವ ಯಾದವ್, ನಿಂಗಪ್ಪ ಕುಂಬಾರ, ಸಿದ್ದಪ್ಪ ನಾಯ್ಕರ, ಪೂಜಾ ಬೋಸಲೆ, ಆರೋಗ್ಯ ಇಲಾಖೆಯ ಶಾರದಾ ಹುನ್ನೂರ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಮುಂತಾದವರಿದ್ದರು.

# ರೋಟರಿ ಆಸ್ಪತ್ರೆಯಲ್ಲಿ 10 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆ



■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ–ಬೆಟಗೇರಿ ವೆಲ್‌ಫೇರ್ ಸೊಸೈಟಿ, ರೋಟರಿ ಕ್ಲಬ್ ಗದಗ–ಬೆಟಗೇರಿ, ಹಾಗೂ ಗದಗ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ ಗದಗ, ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 187ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ 16 ಜನರಿಗೆ ಯಶಸ್ವಿಯಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಲಾಯಿತು.

ಈ ಶಿಬಿರವನ್ನು ಲಕ್ಷ್ಮಣಸಾ ನರಸಿಂಗಸಾ ಹಬೀಬ ಆ್ಯಂಡ್ ಕಂಪನಿ, ಗದಗ, ಪಾರ್ವತಿ ಪೆಟ್ರೋಲಿಯಂ, ಗದಗ, ಹಾಗೂ ದಿ. ಅಂದಾನಪ್ಪ ಮಲ್ಲಪ್ಪ ಗೌಡರ ಇವರ ಸ್ಮರಣಾರ್ಥ ಶ್ರೀಮತಿ ಶಾಂತಾದೇವಿ ಎ.ಗೌಡರ, ಇನ್ನರ್ ವ್ಹೀಲ್ ಕ್ಲಬ್ ಗದಗ–ಬೆಟಗೇರಿಯ ಸುವರ್ಣ ಮಹೋತ್ಸದ ಅಂಗವಾಗಿ ಪ್ರಾಯೋಜತ್ವವನ್ನು ವಹಿಸಿದ್ದರು. ನೇತ್ರ ತಜ್ಞರಾದ ಡಾ. ಗಜಾನನ ಡಿ.ಚನ್ನಶೆಟ್ಟಿ ಸುಮಾರು 26 ಜನ ರೋಗಿಗಳನ್ನು ತಪಾಸಣೆ ಮಾಡಿ, ಶಸ್ತ್ರ ಚಿಕಿತ್ಸೆಗೆ ಯೋಗ್ಯರಾದ 10 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯನ್ನು ಕೈಗೊಂಡರು. ರುದ್ರೇಶ, ಜ್ಯೋತಿ ದೊಡ್ಡಮನಿ, ನೇತ್ರ ಹೆಚ್, ಮಲ್ಲಪ್ಪ ಕುಂಬಾರ, ಅಕ್ಷತಾ, ಆನಂದ ಸಿಂಗ್ರಿ ನೇತ್ರ ಶಸ್ತ್ರ ಚಿಕಿತ್ಸೆ ನಡೆಸಲು ಸಹಾಯ ಮಾಡಿದರು. ಚಿಕಿತ್ಸೆಯ ನಂತರ ವಹಿಸಬೇಕಾದ ಕಣ್ಣಿನ ಕಾಳಜಿ ಕುರಿತು ನೇತ್ರ ತಜ್ಞರಾದ ಡಾ. ಗಜಾನನ ಡಿ.ಚನ್ನಶೆಟ್ಟಿ ತಿಳಿಸಿದರು. ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತರವರು ಸರ್ವರಿಗೂ ಧನ್ಯವಾದಗಳನ್ನು ತಿಳಿಸಿದರು.

> ರೋಟರಿ ಕ್ಲಬ್ ಗದಗ–ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ರೊ. ಶ್ರೀಧರ ಸುಲ್ತಾನಪೂರ, ಕಾರ್ಯದರ್ಶಿಗಳಾದ ರೊ. ಬಾಲಕೃಷ್ಣ ಕಾಮತ, ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ, ಕಾರ್ಯದರ್ಶಿ ರೊ. ವೀಣಾ ಆರ್.ತಿರ್ಲಾಪೂರ, ರೊ. ನರೇಶ ಡಿ.ಜೈನ, ಸದಸ್ಯರಾದ ರೊ.ಡಾ. ಶೇಖರ ಡಿ.ಸಜ್ಜನರ, ರೊ. ಶಿವಾಚಾರ್ಯ ಎಸ್.ಹೊಸಳ್ಳಿಮಠ, ರೊ. ಡಾ. ಆರ್.ಬಿ ಉಪ್ಪಿನ, ರೊ. ಡಾ. ಪ್ರದೀಪ ಉಗಲಾಟ, ರೊ. ಹೆಚ್.ಎಸ್ ಪಾಟೀಲ, ರೊ. ವಿಶ್ವನಾಥ ಯಳಮಲಿ, ರೊ. ಅಕ್ಷಯ ವ್ಹಿ.ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

# 23ನೇ ವಾರ್ಡ್‌ನಲ್ಲಿ ಹೈ ಮಾಸ್ಟ್ ದೀಪ ಲೋಕಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆಯ 23ನೇ ವಾರ್ಡ್‌ನಲ್ಲಿರುವ ಒಕ್ಕಲಗೇರಿ ಓಣಿಯ ದೇಸಾಯಿ ಪ್ಲಾಟ್ ಹತ್ತಿರದ ಶ್ರೀ ಪತ್ರೇಶ್ವರ ದೇವಸ್ಥಾನದಲ್ಲಿನ ಪ್ರಮುಖ ರಸ್ತೆಯಲ್ಲಿ ರವಿವಾರ ಸಾಯಂಕಾಲ ಹೈ ಮಾಸ್ಟ್ ವಿದ್ಯುತ್ ದೀಪದ ಕಂಬವನ್ನು ಲೋಕಾರ್ಪಣೆಗೊಳಿಸಿ, ಸಾರ್ವಜನಿಕ ಉಪಯುಕ್ತತೆಗೆ ಚಾಲನೆ ನೀಡಲಾಯಿತು.



ನಗರಸಭೆಯ 23ನೇ ವಾರ್ಡಿನ ಸದಸ್ಯರು ಹಾಗೂ ನಗರಸಭೆಯ ವಿರೋಧ ಪಕ್ಷದ ಉಪ ನಾಯಕ ಜನಾಬ ಬರಕತಲಿ ಮುಲ್ಲಾ, ಓಣಿಯ ಹಿರಿಯ ಮುಖಂಡರಾದ ಬಸಪ್ಪ ಫಕ್ಕಿರಪ್ಪ ಗುಗ್ಗರಿ, ನಾಗಪ್ಪ ಗುಗ್ಗರಿ, ಗದಗ ಶಹರ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಮಾರ್ತಾಂಡಪ್ಪ ಹಾದಿಮನಿ, ಕಾಂಗ್ರೆಸ್ ಮುಖಂಡರಾದ ಜನಾಬ್ ಎಚ್.ಕೆ ಮುಲ್ಲಾ ಹಾಗೂ ನ್ಯಾಯವಾದಿ, ಸಾಮಾಜಿಕ ಕಾರ್ಯಕರ್ತ ರಾಘವೇಂದ್ರ ಪಾಲನಕರ ನೇತೃತ್ವ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾರ್ತಾಂಡಪ್ಪ ಹಾದಿಮನಿ, ವಾರ್ಡಿನ ಸರ್ವತೋಮುಖ ಅಭಿವೃದ್ಧಿಗಾಗಿ ಬರಕತಲಿ ಮುಲ್ಲಾರವರು ಜನಪರ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ ಪಾಟೀಲರ ಮುಂದಾಳತ್ವದಲ್ಲಿ ಅಭೂತಪೂರ್ವ ಕಾರ್ಯಕ್ರಮಗಳನ್ನು ಕೈಗೊಂಡಿರುವದು ಸಮಸ್ತ ವಾರ್ಡಿನ ನಾಗರಿಕರಿಗೆ ಸಂತಸದ ಸಂಗತಿಯಾಗಿದೆ ಎಂದರು.

ಮಹಾದೇವಪ್ಪ ಮೂಲಿಮನಿ, ಮುತ್ತು ರೋಣದ, ಖಾದರ್ ಕಿರೆಸೂರ್, ದೇವೇಂದ್ರಪ್ಪ ಹೊನಗಣ್ಣವರ, ಸಿದ್ದಪ್ಪ ಮೂರ್ಲಾಪೂರ, ಬಸವರಾಜ ಹತ್ತಿಶೆಟ್ಟರ್, ಸಿದ್ದಪ್ಪ ತುರಾಕಾಣಿ, ಮುತ್ತು ತೊಂಡಿಹಾಳ, ಪರಶುರಾಮ್ ಕಂಬಳಿ, ಜಗದೀಶ್ ಚನ್ನಪ್ಪಗೌಡರ, ಸತ್ಯಪ್ಪ ಗಿಡ್ಡಹನಮಣ್ಣವರ, ಜಾಕೀರ ಸಾಬ್ ಕುನ್ನಿಬಾವಿ, ಮಂಜು ಹಿತ್ತಲಮನಿ, ಸುಲೇಮಾನ್ ಡೋಲಿ ಬಸವರಾಜ ತೋಟದ ದಾವೂದ್ ಡೋಲಿ, ಮುತ್ತಪ್ಪ ಹೊನಗಣ್ಣವರ ಮುತ್ತು ಜಾಲಗಾರ್, ಮೆಹಬೂಬ್ ಸಾಬ್ ಆಡರಕಟ್ಟಿ ಆಶೀಪ್ ಮುಲ್ಲಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಕ್ರೀಡಾಪಟುಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿ

▶▶ ಮೊದಲನೇ ಪುಟದಿಂದ

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಗದಗ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಚ್.ಎಸ್ ಜಿನಗಾ, ಜಿಲ್ಲಾ ಯುವ ಒಕ್ಕೂಟದ ಅಧ್ಯಕ್ಷ ರವಿಕಾಂತ ಅಂಗಡಿ, ಡಿಡಿಪಿಐ ಎಂ.ಎ ರಡ್ಡೇರ, ಗದಗ ಶಹರ ಬಿಇಓ ಆರ್.ಎಸ್ ಬುರಡಿ, ಗದಗ ಗ್ರಾಮೀಣ ಬಿಇಓ ವಿ.ವಿ ನಡುವಿನಮನಿ, ಬಿ.ಎಫ್ ಪೂಜಾರ, ಗದಗ ಗ್ರಾಮೀಣ ಟಿಪಿಓ ಪವಾರ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕರಾದ ಎಂ.ಎನ್ ತುಕ್ಕ, ಎಸ್.ಎಸ್ ಸಂದಿಗವಾಡ, ವೈ.ಕೆ ಚೌಡಾಪೂರ, ಎಚ್.ಜಿ ಕಾಂಬಳೇಕರ, ಎಸ್.ಬಿ ಪೂಜಾರ, ಪಿ.ಎಸ್ ಹಬೀಬ್, ಎನ್.ಕೆ ಯರಗುಡಿ ಅವರನ್ನು ಸನ್ಮಾನಿಸಿ ಗೌರವಿಸಿದರು. ಗದಗ ತಾಲೂಕು ಕ್ರೀಡಾಧಿಕಾರಿ ಎಂ.ಎಸ್ ಕುಚಬಾಳ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ವೈ.ಕೆ ಚೌಡಾಪೂರ ನಿರೂಪಿಸಿದರು. ಜೆ.ಬಿ ಅಣ್ಣಿಗೇರಿ ವಂದಿಸಿದರು. ಗದಗ ತಾಲೂಕಿನ 650ಕ್ಕೂ ಹೆಚ್ಚು ಬಾಲಕ-ಬಾಲಕಿಯರು ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು.

# ಉದಾತ್ತ ಬದುಕಿಗೆ ಧರ್ಮಸಭೆಗಳು ವೇದಿಕೆಯಾಗಿವೆ

▶▶ ಮೊದಲನೇ ಪುಟದಿಂದ

ಸೇವೆ, ಧರ್ಮದ ಗುರುಗಳಿಂದ ಧರ್ಮ ಸಂದೇಶ ನೀಡುವಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡುವುದು ಶ್ಲಾಘನೀಯ ಎಂದರು.

ಮುಕ್ತಿಮಂದಿರ, ಮಳೆ ಮಲ್ಲಿಕಾರ್ಜುನ ಶ್ರೀಗಳು ಮತ್ತು ಭಕ್ತರು ತಮ್ಮ ಭಕ್ತಿ ಸೇವೆ ಸಮರ್ಪಿಸಿದರು. ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಮತ್ತು ಗಂಜಿಗಟ್ಟಿಯ ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಅತ್ಯಂತ ಪವಿತ್ರ ಮತ್ತು ಜಾಗೃತ ಸ್ಥಳವಾಗಿರುವ ಶ್ರೀ ದುಂಡಿಬಸವೇಶ್ವರ ದೇವಸ್ಥಾನ ಪ್ರದೇಶದಲ್ಲಿ ಧರ್ಮ, ಶಿಕ್ಷಣ, ಸಂಸ್ಕಾರ ಮತ್ತು ಸಮಾಜ ಸೇವಾ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶ ಸಮಿತಿಯವರದ್ದಾಗಿದೆ. ಯಾವುದೇ ಸೌಲಭ್ಯಗಳಿಲ್ಲದೇ ಕಾಲಗರ್ಭದಲ್ಲಿ ಮರೆಯಾಗುವ ಸ್ಥಿತಿಯಲ್ಲಿದ್ದ ದೇವಸ್ಥಾನವನ್ನು ಪ್ರಸಿದ್ಧಿಗೊಳಿಸಿರುವ ಸಮಿತಿಯವರು ಪ್ರತಿವರ್ಷ ಸಮಾಜಮುಖಿ ಕಾರ್ಯಕ್ರಮಗಳೊಂದಿಗೆ ಜಾತ್ರಾ ಮಹೋತ್ಸವ ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಹೂವಿನಶಿಗ್ಲಿಯ ಚನ್ನವೀರ ಮಹಾಸ್ವಾಮಿಗಳು, ಕರೆವಾಡಿಮಠದ ಮಳೆಮಲ್ಲಿಕಾರ್ಜುನ ಶ್ರೀಗಳು ಮಾತನಾಡಿದರು. ಧರ್ಮಸಭೆಯಲ್ಲಿ ಮಾಜಿ ಸಂಸದ ಮಂಜುನಾಥ ಕುನ್ನೂರ, ಶಾಸಕ ಡಾ. ಚಂದ್ರು ಲಮಾಣಿ, ಗೌರಮ್ಮ ಬಡ್ನಿ ಮಾತನಾಡಿದರು. ಮಂಜನಗೌಡ ಕೆಂಚನಗೌಡ್ರ, ನಿರ್ಮಲಾ ತಳವಾರ, ಕರಿಯಪ್ಪಗೌಡ ಹೊಸಗೌಡ್ರ, ಪದ್ಮರಾಜ ಪಾಟೀಲ, ಸುಶೀಲವ್ವ ಮರಿಲಿಂಗನಗೌಡ್ರ, ಸುಧಾ ಮಾದರ, ನಾಗರತ್ನ ಕಡಾರಿ, ಈರಣ್ಣ ಅಂಕಲಕೋಟಿ, ಬಸವರಾಜ ಬೆಂಡಿಗೇರಿ ಸೇರಿ ದೇವಸ್ಥಾನ ಸಮಿತಿ ಸರ್ವ ಸದಸ್ಯರು, ಹಿರಿಯರು ಉಪಸ್ಥಿತರಿದ್ದರು.

ಜಾತ್ರಾ ಮಹೋತ್ಸವದ ಅಂಗವಾಗಿ ರಕ್ತದಾನ ಶಿಬಿರ, ಸಂಗೀತ ಕಾರ್ಯಕ್ರಮ ನೆರವೇರಿತಲ್ಲದೆ, ಸೇವಾಕರ್ತರು, ದಾನಿಗಳನ್ನು ಸನ್ಮಾನಿಸಲಾಯಿತು. ದೇವಸ್ಥಾನ ಕಮಿಟಿ ಅಧ್ಯಕ್ಷ ಬಸವರಾಜ ಕೊಟಗಿ ಪ್ರಾಸ್ತಾವಿಕ ಮಾತನಾಡಿದರು. ರತ್ನಾ ಕುಂಬಾರ, ನಿಂಗಪ್ಪ ಶಿವಬಸಣ್ಣವರ, ಶಿವಪ್ಪ ಕಟಗಿ ನಿರೂಪಿಸಿದರು.

# ನರೇಗಲ್ಲ: ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110//11 ಕೆವಿ ನರೇಗಲ್, ವಿದ್ಯುತ್ ಉಪ-ಕೇಂದ್ರದ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಸೆಪ್ಟೆಂಬರ್ 13 ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಮೇಲ್ಕಂಡ ವಿದ್ಯುತ್ ವಿತರಣಾ ಉಪ-ಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ನರೇಗಲ್ ಪಟ್ಟಣ ಹಾಗೂ ಗ್ರಾಮಗಳಾದ ಕೋಡಿಕೊಪ್ಪ, ತೋಟಗಂಟಿ, ಮಲ್ಲಾಪುರ, ಬೂದಿಹಾಳ, ಕೊಚಲಾಪುರ, ದ್ಯಾಂಪುರ, ಹಾಳಕೇರಿ, ನಿಡಗುಂದಿ, ನಿಡಗುಂದಿಕೊಪ್ಪ, ಕಳಕಾಪುರ, ಮಾರನಬಸರಿ, ಜಕ್ಕಲಿ, ಕೋಟುಮಚಗಿ, ನಾರಾಯನಪುರ, ಅಬ್ಬಿಗೇರಿ, ಯರೆಬೇಲೇರಿ, ನಾಗರಾಳ, ಕುರಡಗಿ, ಡ ಸ ಹಡಗಲಿ, ಗುಜಮಾಗಡಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

### ಪುರಸಭೆಗಿಲ್ಲ ಅಧ್ಯಕ್ಷ, ಉಪಾಧ್ಯಕ್ಷ ಮೀಸಲು ಪ್ರಕಟಣೆ | ಅಭಿವೃದ್ಧಿ ಕಾರ್ಯಗಳು ಕುಂಠಿತ

# ಸಾರಥಿಯಿಲ್ಲದೆ ಸಾಗುತ್ತಿದೆ ಪುರಸಭೆಯ ರಥ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ




ಪಟ್ಟಣದ ಪುರಸಭೆಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನದ ಆಡಳಿತಾವಧಿ ಮುಗಿದು 4 ತಿಂಗಳು ಕಳೆದಿದ್ದರೂ, ಮೀಸಲಾತಿ ಪ್ರಕಟವಾಗಿಲ್ಲ. ಪರಿಣಾಮ, ಪಟ್ಟಣದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿದ್ದು, ಸಾರ್ವಜನಿಕರು ಮೂಲ ಸೌಲಭ್ಯಗಳಿಗಾಗಿ ಪ್ರತಿನಿತ್ಯ ಪರದಾಡುವ ದುಃಸ್ಥಿತಿ ನಿರ್ಮಾಣವಾಗಿದೆ.

ಜಿಲ್ಲೆಯ ವಾಣಿಜ್ಯ ನಗರಿ ಎಂಬ ಪ್ರಖ್ಯಾತಿ ಪಡೆದಿರುವ ಪಟ್ಟಣದ ಪುರಸಭೆಯಲ್ಲಿ 23 ಸ್ಥಾನಗಳಲ್ಲಿ 18 ಬಿಜೆಪಿ ಹಾಗೂ 5 ಕಾಂಗ್ರೆಸ್ ಬೆಂಬಲಿತ ಸದಸ್ಯರಿದ್ದಾರೆ. ಬಿಜೆಪಿ ಪುರಸಭೆ ಗದ್ದುಗೆಯನ್ನು ಹಿಡಿದಿದ್ದು, ಕಾಂಗ್ರೆಸ್ ವಿಪಕ್ಷ ಸ್ಥಾನದಲ್ಲಿದೆ. ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಕಳಕಪ್ಪ ಬಂಡಿ ಪರಾಜಿತವಾಗಿದ್ದು, ಗೆಲುವು ಸಾಧಿಸಿರುವ ಜಿ.ಎಸ್ ಪಾಟೀಲ ಶಾಸಕರಾಗಿದ್ದಾರೆ. ಕ್ಷೇತ್ರದಲ್ಲಾದ ರಾಜಕೀಯ ಬದಲಾವಣೆಯು ಪಟ್ಟಣದ ಪುರಸಭೆಯ ಮೇಲೆಯೂ ಪರಿಣಾಮ ಬೀರಲಿವೆ ಎಂಬ ಚರ್ಚೆಗಳು ನಡೆದಿವೆ.

ಮೊದಲ ಅವಧಿಯಲ್ಲಿ ಪಟ್ಟಣದ ಪುರಸಭೆ ಅಧ್ಯಕ್ಷ ಸ್ಥಾನಕ್ಕೆ ಮೀಸಲು ಸಾಮಾನ್ಯ ಬಂದಿದ್ದರಿಂದ ವೀರಪ್ಪ ಪಟ್ಟಣಶೆಟ್ಟಿ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಅ ವರ್ಗ ಇರುವುದರಿಂದ ಲೀಲಾವತಿ ವನ್ನಾಲ ಮೇ ತಿಂಗಳಲ್ಲಿಯೇ ತಮ್ಮ ಅವಧಿಯನ್ನು ಪೂರ್ಣಗೊಳಿಸಿದ್ದಾರೆ. ಕಳೆದ 4 ತಿಂಗಳನಿಂದ ಸಾಮಾನ್ಯ ಸಭೆ ನಡೆಯದಿರುವುದರಿಂದ ಸಣ್ಣ ಪುಟ್ಟ ಅಭಿವೃದ್ಧಿ ಕಾರ್ಯಗಳೂ ನಡೆಯುತ್ತಿಲ್ಲ. ಜಿಲ್ಲಾ ಉಪ ವಿಭಾಗಾಧಿಕಾರಿ ಅವರನ್ನು ಪುರಸಭೆಗೆ ಆಡಳಿತಾಧಿಕಾರಿಯಾಗಿ ನೇಮಿಸಲಾಗಿದ್ದು, ರೂ. 10 ಸಾವಿರಕ್ಕೂ ಮೇಲ್ಪಟ್ಟ ಕಾಮಗಾರಿಗಳ ಬಿಲ್ ಪಾವತಿಗಾಗಿ ಜಿಲ್ಲಾ ಕೇಂದ್ರದ ಕಾರ್ಯಾಲಯಕ್ಕೆ ಪರವಾನಿಗೆ ಪಡೆಯಲು ಪ್ರಭಾರಿ ಮುಖ್ಯಾಧಿಕಾರಿ ಅಲೆಬೇಕಾಗಿದೆ.

ರಾಜ್ಯ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ವರ್ಗಾವಣೆಯಾದ ಬಳಿಕ ರೇಣುಕಾ ದೇಸಾಯಿ ಪ್ರಭಾರಿ ಮುಖ್ಯಾಧಿಕಾರಿಯಾಗಿ ಕೆಲ ತಿಂಗಳು ಕರ್ತವ್ಯಕ್ಕೆ ಹಾಜರಾಗಿದ್ದರು. ಈಗ ಪುರಸಭೆ ಕಂದಾಯ ನಿರೀಕ್ಷಕರಾಗಿದ್ದ ಬಸವರಾಜ ಬಳಗಾನೂರ ಅವರು ಪುರಸಭೆಯ ಪ್ರಭಾರಿ ಮುಖ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇನ್ನುಳಿದ ಅವಧಿಗೆ ಪುರಸಭೆ ಕಾಯ್ದೆಯಂತೆ ರೊಟೇಷನ್ ಪದ್ಧತಿಯಲ್ಲಿ ಸರ್ಕಾರ ಮೀಸಲಾತಿಯನ್ನು ಘೋಷಣೆ ಮಾಡಿದರೆ ತೆರವಾದ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳನ್ನು ತುಂಬಬಹುದು. ಆಡಳಿತಧಿಕಾರಿಗಳ ನೇಮಕವಾಗಿರುವದರಿಂದ ಪುರಸಭೆ ಸದಸ್ಯರು ಕಳೆದ ಕಳೆದ 4 ತಿಂಗಳಿನಿಂದ ಸಾಮಾನ್ಯ ಸಭೆ ನಡೆಸಿಲ್ಲ. ಹೀಗಾಗಿ ಯಾವುದೇ ಹೊಸ ಕ್ರಿಯಾ ಯೋಜನೆಯ ಸಿದ್ಧತೆ ಮಾಡಿಕೊಂಡಿಲ್ಲ.

ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷರಾಗಿರುವ ಕನಕಪ್ಪ ಅರಳಿಗಿಡದ ಅವರು ಸಾಮಾನ್ಯ ಸಭೆ ನಡೆಸಲು ಅಧಿಕಾರ ಇಲ್ಲದಿರುವುದರಿಂದ ಪ್ರತಿನಿತ್ಯ ಅಧಿಕಾರಿಗಳಿಗೆ ಪುರಸಭೆ ಸದಸ್ಯರು ಹಾಗೂ ಸಾರ್ವಜನಿಕರು ಹೇಳುವ ಸಮಸ್ಯೆಗಳನ್ನು ಕೇವಲ ಕೇಳುವುದಾಗಿದೆಯೇ ಹೊರತು, ಪರಿಹಾರ ಕಂಡುಕೊಳ್ಳುವಲ್ಲಿ ಸಫಲರಾಗುತ್ತಿಲ್ಲ ಎಂಬ ಚರ್ಚೆಗಳು ಪುರಸಭೆ ಪಡಸಾಲೆಯಲ್ಲಿ ಕೇಳಿ ಬರುತ್ತಿವೆ.

> ಪಟ್ಟಣದ ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಮೊದಲ ಅವಧಿಯ ಆಡಳಿತ ಮೇ ತಿಂಗಳಲ್ಲಿ ಪೂರ್ಣಗೊಂಡಿದೆ. ಆದರೆ ಈವರೆಗೂ ಸಹ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಮೀಸಲು ಪ್ರಕಟವಾಗಿಲ್ಲ. ಪರಿಣಾಮ ಹೊಸ ಕ್ರಿಯಾ ಯೋಜನೆ ಹಾಗೂ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಮಯ ಹಿಡಿಯುತ್ತಿದೆ. ಸರ್ಕಾರ ತಕ್ಷಣವೇ ಮೀಸಲು ಪ್ರಕಟ ಮಾಡಬೇಕು.
>
> **– ವೀರಪ್ಪ ಪಟ್ಟಣಶೆಟ್ಟಿ.**
> ಪುರಸಭೆಯ ಹಂಗಾಮಿ ಅಧ್ಯಕ್ಷರು.

# ದೇಶದ ಪ್ರಗತಿಯಲ್ಲಿ ಕೈಗಾರಿಕೆಗಳ ಪಾತ್ರವೂ ಇದೆ

▶▶ ಮೊದಲನೇ ಪುಟದಿಂದ

ಹಾಗೂ ನಿರುದ್ಯೋಗ ನಿವಾರಣೆಯಲ್ಲಿ ತೊಂದರೆಯಾಗಿದೆ. ಈ ಎಲ್ಲ ಕಾರಣದಿಂದಾಗಿ ಕೈಗಾರಿಕಾ ಟೌನ್‌ಶಿಪ್‌ಗಳ ಬೆಳವಣಿಗೆ ಆಗಬೇಕು ಎಂದರು.


ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಮಧುಸೂದನ ಪುಣೇಕರ ಮಾತನಾಡಿ, ಪ್ರತಿ ವರ್ಷ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಗದಗ ಉತ್ಸವ ನಡೆಸಿ ಉತ್ಪಾದಕರಿಗೆ ಹಾಗೂ ಗ್ರಾಹಕರಿಗೆ ಪೂರಕ ವೇದಿಕೆ ಕಲ್ಪಿಸುತ್ತ ಬಂದಿದೆ. ಜೊತೆಗೆ ಶ್ರೇಷ್ಠ ಉದ್ಯಮಿ, ವರ್ತಕ ಪ್ರಶಸ್ತಿ ನೀಡಿ ಪ್ರೋತ್ಸಾಹಿಸಲಾಗುತ್ತಿದೆ ಎಂದರು.

ಗದಗ ಉತ್ಸವ ಸಮಿತಿಯ ಚೇರಮನ್ ಚಂದ್ರು ಬಾಳಿಹಳ್ಳಿಮಠ ಮಾತನಾಡಿ, ಸರಕಾರಕ್ಕೆ ಹೆಚ್ಚಿನ ತೆರಿಗೆ ತುಂಬುವವರು ಕೈಗಾರಿಕೋದ್ಯಮಿಗಳು, ವರ್ತಕರು, ಉದ್ಯಮಿಗಳು. ಆದರೆ ಸರಕಾರ ಈ ವ್ಯಾಪಾರಸ್ಥರನ್ನು ಅಲಕ್ಷಿಸುತ್ತಿದ್ದು, ಸೂಕ್ತ ಸಹಕಾರ, ಸೌಲಭ್ಯ-ಸ್ಪಂದನೆ ಸಿಗುತ್ತಿಲ್ಲ. ಹೀಗಾಗಿ ಚೇಂಬರ್ ತನ್ನ ಇತಿಮಿತಿಯಲ್ಲಿ ಜೀವಮಾನ ಸಾಧನೆ, ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ನೀಡುವ ಮೂಲಕ ಪ್ರೋತ್ಸಾಹಿಸುವ ಕಾರ್ಯಕ್ಕೆ ಮುಂದಾಗಿದೆ ಎಂದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಹೊಸಳ್ಳಿಯ ಜ.ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಮಾತನಾಡಿ, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಪ್ರತಿ ವರ್ಷ ಗದಗ ಉತ್ಸವ ನಡೆಸಿ ಕೈಗಾರಿಕೋದ್ಯಮಿಗಳನ್ನು, ವ್ಯಾಪಾರಸ್ಥರನ್ನು ಕ್ರಿಯಾಶೀಲಗೊಳಿಸುತ್ತಿರುವದು ಒಳ್ಳೆಯ ಕೆಲಸ. ಹಾಗೆಯೇ ಅವರಿಗೆ ಪ್ರಶಸ್ತಿ ನೀಡಿ ಇತರರಿಗೆ ಮಾದರಿಯನ್ನಾಗಿ ಮಾಡುವ ಕಾರ್ಯ ಮೆಚ್ಚುವಂತದ್ದು ಎಂದರು.

ವೇದಿಕೆಯ ಮೇಲೆ ಸದಾಶಿವಯ್ಯ ಮದರಿಮಠ, ರಾಜಣ್ಣ ಗುಡಿಮನಿ, ತಾತನಗೌಡ ಪಾಟೀಲ, ವೀರೇಶ ಕೂಗು, ಪ್ರಕಾಶ ಉಗಲಾಟದ, ರಾಜಣ್ಣ ಮಲ್ಲಾಡದ, ನಾಗೇಶ ಹುಬ್ಬಳ್ಳಿ, ಸೋಮನಾಥ ಜಾಲಿ, ಹರೀಶಕುಮಾರ ಶಹಾ, ಎಸ್. ಆರ್ ನಾಲತ್ವಾಡಮಠ, ಬಸವರಾಜ ಅಂಗಡಿ, ಶಿವಕುಮಾರ ಪಾಟೀಲ, ಸಂಜಯ ಬಾಗಮಾರ, ಜಯದೇವ ಮೆಣಸಗಿ, ವ್ಹಿ.ಸಿ ಧನ್ನೂರ ಹಿರೇಮಠ, ಬಾಲಚಂದ್ರ ಭರಮಗೌಡ್ರ, ದಾನಯ್ಯ ಗಣಾಚಾರಿ, ಲಿಂಗರಾಜ ತೆ-ೂಟದ, ವಿಜಯಕುಮಾರ ಹಿರೇಮಠ ಉಪಸ್ಥಿತರಿದ್ದರು. ಮಹೇಶ ಕುಂದ್ರಾಳ ಹಿರೇಮಠ ಪ್ರಾರ್ಥಿಸಿದರು, ವ್ಹಿ.ಕೆ ಗುರುಮಠ ನಿರೂಪಿಸಿದರು, ಶರಣಬಸಪ್ಪ ಗುಡಿಮನಿ ವಂದಿಸಿದರು.

> ದೇವದಾಸ ಕಾಮತ ಹಾಗೂ ಎಸ್.ಪಿ ಸಂಶಿಮಠ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶ್ರೇಷ್ಠ ವರ್ತಕ ಪ್ರಶಸ್ತಿಯನ್ನು ಬಸವರಾಜ ಪುರ್ತಗೇರಿ, ಲಿಂಗಬಸಯ್ಯ ಮಠದ, ವೀರಣ್ಣ ಬೇವಿನಮರದ ಅವರಿಗೆ ಹಾಗೂ ಶ್ರೇಷ್ಠ ಉದ್ಯಮಿ ಪ್ರಶಸ್ತಿಯನ್ನು ಭೂಷಣ ಶಹಾ, ಗವಿಸಿದ್ದಪ್ಪ ಪಲ್ಲೇದ, ಬಸವರಾಜ ಹುಡೇದ, ಸೋಮಶೇಖರ ನರೋಣಿ ಅವರಿಗೆ ನೀಡಿ ಗೌರವಿಸಲಾಯಿತು.





ಲಕ್ಷ್ಮೇಶ್ವರದ ಐತಿಹಾಸಿಕ ಪ್ರಸಿದ್ದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶ್ರಾವಣ ಸೋಮವಾರ ಶ್ರೀ ಸೋಮೇಶ್ವರನಿಗೆ ಅಭಿಷೇಕ, ಎಲೆಪೂಜೆ, ಅಲಂಕಾರ ನೆರವೇರಿಸಲಾಗಿತ್ತು. ಬೆಳಿಗ್ಗೆಯಿಂದ ಭಕ್ತರು ಸರದಿ ಸಾಲಿನಲ್ಲಿ ನಿಂತು ದರ್ಶನ ಪಡೆದರು.

# 'ಮಹಾತ್ಮಾಗಾಂಧಿ ಸೇವಾ ಪ್ರಶಸ್ತಿ-ಕರ್ನಾಟಕ' ಆಯ್ಕೆಗೆ ಅರ್ಜಿ ಆಹ್ವಾನ

▶▶ ಮೊದಲನೇ ಪುಟದಿಂದ

ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿ ವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಧಾರ, ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ. ಸೆಪ್ಟೆಂಬರ್ 15 ರ ಒಳಗಾಗಿ ಅರ್ಜಿಗಳನ್ನು ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ ರಸ್ತೆ (ಇನ್ಫೆಂಟ್ರಿ ರಸ್ತೆ), ಬೆಂಗಳೂರು-560001 ಅಥವಾ ಇ-ಮೇಲ್ : information dip-rawards@gmail.com ವಿಳಾಸಕ್ಕೆ ಕಳುಹಿಸಬಹುದಾಗಿದೆ.

# ಒಂದೇ ಸೂರಿನಡಿ ಪರಿಸರ ಸ್ನೇಹಿ ಗಣೇಶ ವಿಗ್ರಹಗಳ ಮಾರಾಟ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾ ಗಣೇಶಮೂರ್ತಿ ತಯಾರಕರ ಸಂಘದ ವತಿಯಿಂದ ಎಪಿಎಂಸಿ ಆವರಣದಲ್ಲಿ ಸುಂದರ, ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಮಾರಾಟ ಮಾಡಲಾಗುತ್ತದೆ.

ಪ್ರತಿ ವರ್ಷದಂತೆ ಈ ಬಾರಿಯೂ ಗದಗ ಜನರು ಸಹಕರಿಸಿ, ಪರಿಸರ ಸ್ನೇಹಿ ಗಣೇಶ ವಿಗ್ರಹಗಳನ್ನು ಖರೀದಿಸಿ, ಸ್ಥಳೀಯ ಕಲಾವಿದರನ್ನು ಪ್ರೋತ್ಸಾಹಿಸಬೇಕು ಎಂದು ಗಣೇಶ ಮೂರ್ತಿ ತಯಾರಕರ ಸಂಘದ ಪ್ರಧಾನ ಕಾರ್ಯದರ್ಶಿ ಮುತ್ತಣ್ಣ ಭರಡಿ ಮನವಿ ಮಾಡಿದ್ದಾರೆ.

ನಗರದ ಎಂಪಿಎಮ್‌ಸಿ ಮಾರುಕಟ್ಟೆಯ ಆವರಣದಲ್ಲಿರುವ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಸುಮಾರು 16 ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದ್ದು, ಸೆ.13ರಿಂದ 19ರವರೆಗೆ ಮುಂಜಾನೆ 9ರಿಂದ ರಾತ್ರಿ 9 ಗಂಟೆಯವರೆಗೆ ಮಳಿಗೆಗಳಲ್ಲಿ ಗಣೇಶ ಮೂರ್ತಿಗಳು ಲಭ್ಯವಿರಲಿವೆ. ಸ್ಥಳೀಯ ಹಾಗೂ ನೆರೆಯ ಜಿಲ್ಲೆಗಳಿಂದ ಕಲಾವಿದರು ತಯಾರಿಸಿರುವ ಶುದ್ಧ ಪರಿಸರ ಸ್ನೇಹಿ ಮಣ್ಣಿನ ಗಣೇಶ ವಿಗ್ರಹಗಳ ಮಾರಾಟ ನಡೆಯಲಿದೆ.

ಇದರ ಸದುಪಯೋಗ ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### 'ಮಕ್ಕಳ ಸ್ನೇಹಿ ಶಿಕ್ಷಕ ಪ್ರಶಸ್ತಿ' ಪ್ರದಾನ ಸಮಾರಂಭದಲ್ಲಿ ಎಂ.ಎ ರಡ್ಡೇರ ಅಭಿಮತ

# ಮಕ್ಕಳಲ್ಲಿರುವ ಆಸಕ್ತಿಯನ್ನು ಗುರುತಿಸಿ ಪ್ರೋತ್ಸಾಹಿಸಿ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪ್ರಾಥಮಿಕ ಶಿಕ್ಷಣವನ್ನು ಗಟ್ಟಿಗೊಳಿಸಿದರೆ ಎಲ್ಲ ಶಿಕ್ಷಣವನ್ನು ಗಟ್ಟಿಗೊಳಿಸಿದಂತಾಗುತ್ತದೆ. ಒಂದು ಮಗು 230 ದಿನ ಶಾಲೆಗೆ ಬಂದು, ಶೇ.40ರಷ್ಟು ಅಂಕಗಳನ್ನು ಪಡೆಯದಿದ್ದರೆ ಯಾವುದೇ ಪ್ರಯೋಜನವಿಲ್ಲ. ಶಿಕ್ಷಕರು ಮಕ್ಕಳಿಗೆ ಬೇಕಾದ ಎಲ್ಲ ವಿಷಯಗಳನ್ನು ಅನುಕೂಲಿಸುವವರಾಗಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಎಂ.ಎ ರಡ್ಡೇರ ಹೇಳಿದರು. ಅವರು ಶನಿವಾರ ಪಟ್ಟಣದ ಶ್ರೀ ವೀರಭದ್ರೇಶ್ವರ ಸಭಾ ಭವನದಲ್ಲಿ ಕಲಾ ಶಿಕ್ಷಣ-ಸಂಸ್ಕೃತಿ ಪ್ರತಿಷ್ಠಾನ ಮುಂಡರಗಿ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ಕಲಾವತಿ ಸೊಲಗಿಯವರ ಸ್ಮರಣೆಯಲ್ಲಿ ಕೊಡುವ 'ಮಕ್ಕಳ ಸ್ನೇಹಿ ಶಿಕ್ಷಕ ಪ್ರಶಸ್ತಿ' ಪ್ರದಾನ ಮಾಡಿ ಮಾತನಾಡಿದರು.

ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ವೈ.ಎನ್ ಗೌಡರ ಮಾತನಾಡಿ, ದೇಶದ ಭವಿಷ್ಯವನ್ನು ಕಟ್ಟಿಕೊಡುವ ಕೆಲಸವನ್ನು ಶಿಕ್ಷಕರು ಮಾಡುತ್ತಾರೆ. ಮಕ್ಕಳ ಉಜ್ವಲ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಕಲಾವತಿ ಸೊಲಗಿ ಒಬ್ಬ ಆದರ್ಶ ಶಿಕ್ಷಕಿಯಾಗಿ ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ನಿತ್ಯ ತಮ್ಮ ಸೇವೆಯನ್ನು ಸಲ್ಲಿಸುತ್ತ ಮಾದರಿಯಾಗಿದ್ದರು. ಅವರ ನೆನಹಿನಲ್ಲಿ ಸೊಲಗಿ ಕುಟುಂಬ ವರ್ಗದವರು ಈ ಕಾರ್ಯಕ್ರಮ ರೂಪಿಸಿರುವುದು ಸೂಕ್ತವಾಗಿದೆ ಎಂದರು. ರೋಣ ತಾಲೂಕಿನ ಬೆಳವಣಕಿ ಶಾಸಕರ ಮಾದರಿ ಕೇಂದ್ರ ಶಾಲೆಯ ಶಿಕ್ಷಕ ಎಫ್.ಸಿ ಚೇಗರಡ್ಡಿ, ಗದಗ ನಗರದ ಎಸ್.ಎಂ ಕೃಷ್ಣಾ ನಗರದ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ವಿವೇಕಾನಂದಗೌಡ ಪಾಟೀಲ, ಮುಂಡರಗಿ ತಾಲೂಕಿನ ಬರದೂರು ಗ್ರಾಮದ ಎಸ್.ಎನ್ ಗೋಡಿ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕಿ ಮಲ್ಲಿಕಾ ನಾಯಕ ಅವರಿಗೆ 5 ಸಾವಿರ ರೂ.ಗಳ ನಗದು ಸಹಿತ 'ಮಕ್ಕಳ ಸ್ನೇಹಿ ಶಿಕ್ಷಕ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಶಿಕ್ಷಕ ಎಫ್.ಸಿ ಚೇಗರಡ್ಡಿ ಮಾತನಾಡಿ, ಅಂಕಗಳು ಮಕ್ಕಳ ಅಳತೆಗೋಲಲ್ಲ. ಕ್ರಿಯಾತ್ಮಕತೆಯೇ ಅವರ ಗೋಲ್ ಆಗಬೇಕು. ಆರೋಗ್ಯಕರ ಸ್ಪರ್ಧೆ ಎನ್ನುವ ಹೆಸರಿನಲ್ಲಿ ಮಕ್ಕಳ ಮೇಲೆ ನಾವು ಒತ್ತಡ ಹಾಕುತ್ತಿದ್ದೇವೆ. ಸ್ಪರ್ಧೆ ಇರುವ ವಾತಾವರಣ ಆರೋಗ್ಯಕರವಾಗಿರಲು ಹೇಗೆ ಸಾಧ್ಯ? ಮಕ್ಕಳ ಸೃಜನಶೀಲ ಬೆಳವಣಿಗೆಯತ್ತ ನಾವು ಗಮನಹರಿಸುವುದು ಅವಶ್ಯವಿದೆ ಎಂದರು. ಗದಗ ಡಯಟ್ ಉಪನ್ಯಾಸಕ ಶಂಕರ ಹಡಗಲಿ ಶಾಲಾ ಶಿಕ್ಷಣ ಹಾಗೂ ಮಕ್ಕಳ ಕಲಿಕೆಯ ಕುರಿತು ಉಪನ್ಯಾಸ ನೀಡಿದರು. ಪ್ರತಿಷ್ಠಾನದ ಅಧ್ಯಕ್ಷ ಡಾ.ನಿಂಗು ಸೊಲಗಿ, ವಿವೇಕಾನಂದಗೌಡ ಪಾಟೀಲ, ಜಿ.ಪಂ ಮಾಜಿ ಉಪಾಧ್ಯಕ್ಷೆ ಶೋಭಾ ಮೇಟಿ ಮಾತನಾಡಿದರು. ವಿಶ್ರಾಂತ ಮುಖ್ಯೋಪಾಧ್ಯಾಯ ಐ.ಕೆ ಕುಷ್ಟಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ತಾಲೂಕು ಭಾರತ ಸೇವಾದಳ ಅಧ್ಯಕ್ಷ ಕರಬಸಪ್ಪ ಹಂಚಿನಾಳ, ಎಚ್.ಎಸ್ ಪಾಟೀಲ ಪ್ರತಿಷ್ಠಾನದ ಅಧ್ಯಕ್ಷ ಲಿಂಗರಾಜಗೌಡ ಪಾಟೀಲ, ರೋಟರಿ ಶಿಕ್ಷಣ ಸಂಸ್ಥೆ ಗೌರವ ಕಾರ್ಯದರ್ಶಿ ಕೊಟ್ರೇಶ ಅಂಗಡಿ, ಸಾಮಾಜಿಕ ಕಾರ್ಯಕರ್ತ ಮಂಜುನಾಥ ಇಟಗಿ, ಬಿಇಓ ಗಂಗಾಧರ ಅಣ್ಣಿಗೇರಿ ಅತಿಥಿಗಳಾಗಿ ಪಾಲ್ಗೊಂಡಿದ್ದರು. ವಿಶ್ವಾಸ ಸೊಲಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಲ್ಲಿಕಾರ್ಜುನ ಸೊಲಗಿ ಸ್ವಾಗತಿಸಿದರು. ಮಂದರಾ ವಾಸ್ಟರ್, ಪಾರ್ವತಿ ಪತ್ತಾರ ನಿರೂಪಿಸಿದರು. ಶಿವಕುಮಾರ ಕುಷ್ಟಗಿ ವಂದಿಸಿದರು.

> ಪ್ರಶಸ್ತಿಗಳನ್ನು ನೀಡುವುದರಿಂದ ಸಾಮಾಜಿಕ ವ್ಯವಸ್ಥೆಯ ಸುಧಾರಣೆ ಕೆಲಸಕ್ಕೆ ಪ್ರೋತ್ಸಾಹ ಮತ್ತು ಪ್ರೇರಣೆ ನೀಡಿದಂತಾಗುತ್ತದೆ. ಪಾಲಕರು ತಮ್ಮ ಇಚ್ಛೆಯಂತೆ ಮಕ್ಕಳನ್ನು ಕಲಿಕೆಯಲ್ಲಿ ತೊಡಗಿಸಬಾರದು. ಮಕ್ಕಳಲ್ಲಿರುವ ಆಸಕ್ತಿಯನ್ನು ಗುರುತಿಸಿ ಅದಕ್ಕನುಗುಣವಾಗಿ ಅವರನ್ನು ಪ್ರೋತ್ಸಾಹಿಸಬೇಕು. ಒಟ್ಟು 3 ಜನ ಕ್ರಿಯಾಶೀಲ ಶಿಕ್ಷಕರನ್ನು ಗುರುತಿಸಿ ಪ್ರಶಸ್ತಿ ನೀಡಿರುವುದು ಇವರೆಲ್ಲರ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದೆ.
>
> **– ಎಂ.ಎ ರಡ್ಡೇರ.**
> ಶಾಲಾ ಶಿಕ್ಷಣ-ಸಾಕ್ಷರತಾ ಇಲಾಖೆಯ ಜಿಲ್ಲಾ ಉಪನಿರ್ದೇಶಕರು.

# ನಾಳೆ ನರಗುಂದದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಸೆಪ್ಟೆಂಬರ್ 13 ರಂದು ಬೆ10.30 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ನರಗುಂದ ತಹಸೀಲ್ದಾರ ಕಚೇರಿ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಸದರಿ ದಿನಾಂಕದಂದು ಸಾರ್ವಜನಿಕರಿಂದ ದೂರು/ ಅ ಹ ವಾ ಲ ು ಗ ಳ ನ ್ನ ಸ್ವೀಕರಿಸಲಾಗುವುದು.

# ರೈತ ಬಾಂಧವರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ಮುಂಗಾರಿನಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ (RWBCIS) ಬೆಳೆ ವಿಮಾ ಯೋಜನೆಯಡಿ ಬೆಳೆ ಸಮೀಕ್ಷೆಯಲ್ಲಿ ತಾಳೆಯಾಗದಿರುವ ಬೆಳೆಗಳಿಗೆ ವಿಮಾ ಪಾವತಿಸಿದ ಪ್ರಸ್ತಾವನೆಗಳಿಗೆ ಬೆಳೆ ಸಮೀಕ್ಷೆ ಆಪ್ ಮುಖಾಂತರ ಸಂಬಂಧಪಟ್ಟ ರೈತರು ಸೆಪ್ಟೆಂಬರ್ 15ರೊಳಗಾಗಿ ತಾವು ಬೆಳೆ ವಿಮೆ ಪಾವತಿಸಿದ ಬೆಳೆಯ ಛಾಯಾಚಿತ್ರಗಳನ್ನು ಬೆಳೆ ಸಮೀಕ್ಷೆ ಆಪ್ ಮುಖಾಂತರ ಇಂದಿಕರಿಸುವುದು ಕಡ್ಡಾಯವಾಗಿದ್ದು, ತಪ್ಪಿದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಈ ಕುರಿತು ಸದರಿ ರೈತರ ನೋಂದಾಯಿತ ದೂರವಾಣಿ ಸಂಖ್ಯೆಗಳಿಗೆ ಈಗಾಗಲೇ ಸಂದೇಶಗಳನ್ನು ಕೇಂದ್ರ ಕಚೇರಿಯಿಂದ ಕಳುಹಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತಾಲೂಕು ಅಥವಾ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದು.

# ಉದ್ದಿಮೆ ಪರವಾನಿಗೆ ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಸ್ತ ಅಂಗಡಿ, ವ್ಯಾಪಾರ, ಉದ್ದಿಮೆ ಹಾಗೂ ಇತರೆ ವಹಿವಾಟು ನಡೆಸುವ ಮಾಲೀಕರುಗಳಿಗೆ ತಿಳಿಯಪಡಿಸುವುದೇನೆಂದರೆ, 1964ನೇ ಕರ್ನಾಟಕ ಪೌರಸಭೆಗಳ ಅಧಿನಿಯಮದ ಕಲಂ 256ರ ಅಡಿಯಲ್ಲಿ 13ನೇ ಅನುಸೂಚಿಯಲ್ಲಿ ಸೂಚಿಸುವಂತಹ ಯಾವುದೇ ಅಂಗಡಿ ವ್ಯಾಪಾರ, ಉದ್ದಿಮೆ ಹಾಗೂ ಇತರೆ ವಹಿವಾಟು ನಡೆಸುತ್ತಿದ್ದಲ್ಲಿ ನಗರಸಭೆಯಿಂದ ಪ್ರಸ್ತುತ ಪರವಾನಗಿ ಪಡೆಯುವುದು ಕಡ್ಡಾಯವಾಗಿರುತ್ತದೆ.

ಈಗಾಗಲೇ ಲೈಸನ್ಸ್ ಪಡೆದವರು ಸನ್ 2022–23ನೇ ಸಾಲಿನ ಚಾಲ್ತಿ ಅವಧಿ ಮುಗಿದಿದ್ದು, ವ್ಯಾಪಾರಸ್ಥರು ತಮ್ಮ ಲೈಸನ್ಸ್‌ಗಳನ್ನು ಇನ್ನೂವರೆಗೂ ನವೀಕರಿಸಿಕೊಂಡಿರುವುದಿಲ್ಲ ಮತ್ತು 2023–24ನೇ ಸಾಲಿನ ಅವಧಿಯು ದಿನಾಂಕ:31–03–2024 ರಂದು ಮುಗಿಯಲಿದ್ದು, ಲೈಸನ್ಸ್‌ಗಳನ್ನು ನವೀಕರಿಸಿಕೊಳ್ಳಬೇಕು. ಅನಧಿಕೃತವಾಗಿ ವ್ಯಾಪಾರ ಹಾಗೂ ಉದ್ದಿಮೆ ಮತ್ತು ಇತರೆ ವಹಿವಾಟು ಮಾಡುವ ವ್ಯಾಪಾರಸ್ತರು ಲೈಸನ್ಸ್ ಪಡೆಯದೇ ಇದ್ದವರು ಸೂಕ್ತ ದಾಖಲೆಗಳಾದ ಉತಾರ 2023–24ರ ಕಂದಾಯ ತುಂಬಿದ ರಶೀದಿ, ಆಧಾರ ಕಾರ್ಡ್ ಅಥವಾ ಗುರುತಿನ ಚೀಟಿ, ಭಾಡಿಗೆ ಕರಾರು ಪತ್ರ, ಝುರಾಕ್ಸ್ ಪ್ರತಿಗಳು ಹಾಗೂ ಪಾಸ್‌ಪೋರ್ಟ ಸೈಜ್ ಫೋಟೋ, ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿ ದಿನಾಂಕ:31–03–2024ರ ರೊಳಗಾಗಿ ವ್ಯಾಪಾರ ವಹಿವಾಟು ಮಾಡಲು ಆನ್‌ಲೈನ್ ತಂತ್ರಾಂಶದ ಮೂಲಕ ಸೃಜಿಸಿದ ಡಿಜಿಟಲ್ ಸಹಿಯುಳ್ಳ ಉದ್ದಿಮೆ ಪರವಾನಿಗೆ ಪತ್ರವನ್ನು ಕಡ್ಡಾಯವಾಗಿ ಪಡೆದುಕೊಂಡು ವ್ಯಾಪಾರವನ್ನು ಮಾಡಲು ಈ ಮೂಲಕ ವಿನಂತಿಸಿದೆ. ಇದಕ್ಕೆ ತಪ್ಪಿದಲ್ಲಿ ಕರ್ನಾಟಕ ಪೌರಸಭಾ ಅಧಿನಿಯಮದ ಅನ್ವಯ ದಂಡ ವಿಧಿಸುವುದಲ್ಲದೆ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲು ಮಾಡಲಾಗುವುದು.

ಇಂತಹ ಅಹಿತಕರ ಘಟನೆಗಳಿಗೆ ಅವಕಾಶ ಕಲ್ಪಿಸದೆ ಸಮಸ್ತ ಅಂಗಡಿ, ವ್ಯಾಪಾರ, ಉದ್ದಿಮೆ ಹಾಗೂ ಇತರೆ ಪರವಾನಿಗೆಯನ್ನು 2023–24ನೇ ಸಾಲಿನವರೆಗೆ ನವೀಕರಿಸಿಕೊಳ್ಳಬೇಕು. ಅನಧಿಕೃತವಾಗಿ ವ್ಯಾಪಾರ ಹಾಗೂ ಉದ್ದಿಮೆ ಮತ್ತು ಇತರೆ ವಹಿವಾಟು ಮಾಡುವ ವ್ಯಾಪಾರಸ್ತರು ಲೈಸನ್ಸ್ ಪಡೆದು ವ್ಯಾಪಾರ ಮಾಡಿಕೊಳ್ಳಬೇಕು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜಿಲ್ಲೆಯಲ್ಲಿ 6777 ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥ: ಜಿಲ್ಲಾ ನ್ಯಾ. ಬಸವರಾಜ**

# ಲೋಕ ಅದಾಲತ್‌ನಲ್ಲಿ 10 ದಂಪತಿಗಳ ಪುನರ್ಮಿಲನ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋಚ್ಚ ನ್ಯಾಯಾಲಯ ನವದೆಹಲಿ, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ಆದೇಶದನ್ವಯ ರಾಜ್ಯಾದ್ಯಂತ 'ರಾಷ್ಟ್ರೀಯ ಲೋಕ ಅದಾಲತ್' ಹಮ್ಮಿಕೊಂಡಿದ್ದು, ಗದಗ ಜಿಲ್ಲೆಯಲ್ಲಿ ಶನಿವಾರದಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಜಿಲ್ಲೆಯಲ್ಲಿ ಒಟ್ಟು 16 ಬೆಂಚ್‌ಗಳನ್ನು ರಚಿಸಿ ರಾಜೀ ಸಂಧಾನಕ್ಕೆ ಆಯ್ಕೆ ಮಾಡಿಕೊಳ್ಳಲಾಗಿತ್ತು. ಅದರಲ್ಲಿ 2067 ಚಾಲ್ತಿ ಪ್ರಕರಣಗಳನ್ನು ಹಾಗೂ 4710 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದ್ದು, ಒಟ್ಟು 6777 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ.

ಇತ್ಯರ್ಥಗೊಂಡ ಪ್ರಕರಣಗಳಲ್ಲಿ 10 ಮೋಟಾರು ವಾಹನ ಅಪಘಾತ ಪ್ರಕರಣಗಳು, 118 ಚೆಕ್‌ಬೌನ್ಸ್ ಪ್ರಕರಣಗಳು, 33 ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು, 364 ಅಸಲುದಾವೆ ಪ್ರಕರಣಗಳು, 116 ಬ್ಯಾಂಕ್ ಹಾಗೂ ಹಣ ವಸೂಲಾತಿ ಪ್ರಕರಣಗಳು, 38 ವೈವಾಹಿಕ ಪ್ರಕರಣಗಳು, 13 ವಿದ್ಯುಚ್ಛಕ್ತಿ ಪ್ರಕರಣಗಳು ಸೇರಿದಂತೆ ಒಟ್ಟು 2067 ಚಾಲ್ತಿ ಪ್ರಕರಣಗಳನ್ನು ಒಟ್ಟು 13,99,66,852 ರೂ.ಗಳ ಪರಿಹಾರ ಒದಗಿಸುವುದರ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ.



ವ್ಯಾಜ್ಯಪೂರ್ವ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿವಿಧ ಬ್ಯಾಂಕ್ ಪ್ರಕರಣಗಳು, ಬಿಎಸ್‌ಎನ್‌ಎಲ್ ಕಂದಾಯ ಅದಾಲತ್ ಪ್ರಕರಣಗಳು ಸೇರಿದಂತೆ ಒಟ್ಟು 4710 ವ್ಯಾಜ್ಯಪೂರ್ವ ಪ್ರಕರಣಗಳನ್ನು 6,07,88,407ರೂ.ಗಳಿಗೆ ರಾಜೀ ಸಂಧಾನ ಮಾಡಲಾಗಿದೆ. ವಿಶೇಷವಾಗಿ ಗದುಗಿನ ಪ್ರಧಾನ ಕೌಟುಂಬಿಕ ನ್ಯಾಯಾಲಯದಲ್ಲಿ ಹಾಗೂ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದಲ್ಲಿ 8 ಪ್ರಕರಣಗಳಲ್ಲಿ ದಂಪತಿಗಳನ್ನು ಪುನಃ ಒಂದುಗೂಡಿಸಿ ಹಾರ ಬದಲಾಯಿಸಿ, ಅವರಿಗೆ ಸಿಹಿ ಹಂಚಿ ಕಳುಹಿಸಿಕೊಡಲಾಯಿತು. ರೋಣದಲ್ಲಿ 1 ಜೋಡಿ, ಲಕ್ಷ್ಮೇಶ್ವರದಲ್ಲಿ 1 ಜೋಡಿ ದಂಪತಿಗಳನ್ನು ಪುನಃ ಒಂದುಗೂಡಿಸಿ ಕಳುಹಿಸಿಕೊಡಲಾಯಿತು. ಒಟ್ಟು 10 ದಂಪತಿಗಳು ಈ ರಾಷ್ಟ್ರೀಯ ಲೋಕ ಅದಾಲತ್ ಮೂಲಕ ಪುನಃ ಒಂದಾಗಿದ್ದು ವಿಶೇಷವಾಗಿದೆ.

ಗದುಗಿನಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರ ಎಸ್ ಶೆಟ್ಟಿ, 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾದರಸಾಬ ಎಚ್..ಬೆನಕಟ್ಟಿ, ಪ್ರಧಾನ ಹಿರಿಯ ನ್ಯಾಯಾಧೀಶರು/ಸಿಜೆಎಂ ಶ್ರೀಮತಿ ಪ್ರೀತಿ ಸದ್ಗುರು ಸದರಜೋಶಿ, ಅಪರ ಹಿರಿಯ ದಿವಾಣಿ ನ್ಯಾಯಾಧೀಶರಾದ ಪ್ರಕಾಶ ಸಿ.ಕುರುಬೆಟ್, ಪ್ರಧಾನ ದಿವಾಣಿ ನ್ಯಾಯಾಧೀಶರಾದ ಅರುಣ ಚೌಗಲೆ, ಜೆಎಂಎಫ್‌ಸಿ 1ನೇ ನ್ಯಾಯಾಲಯದ ನ್ಯಾಯಾಧೀಶರಾದ ಪುಷ್ಪಾ ಜೋಗೋಜಿ, ಜೆಎಂಎಫ್‌ಸಿ 2ನೇ ನ್ಯಾಯಾಲಯದ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ ಹಿರೇಮನಿಪಾಟೀಲ, ಉಪಾಧ್ಯಕ್ಷರಾದ ಎ.ಎಂ ಹದ್ಲಿ, ಪ್ರಧಾನ ಕಾರ್ಯದರ್ಶಿ ಬಿ.ಎಚ್ ಮಾಡಲಗೇರಿ, ಜಂಟಿ ಕಾರ್ಯದರ್ಶಿ ಪಿ.ಬಿ ಕಣಗಿನಹಾಳ, ಖಜಾಂಚಿ ವಿ.ಎಚ್ ಮೇರವಾಡೆ, ಸರ್ಕಾರಿ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ, ಜಿಲ್ಲಾ ಸರ್ಕಾರಿ ವಕೀಲರಾದ ಬಿ.ಟಿ ಪಾಟೀಲ, ಅಪರ ಜಿಲ್ಲಾ ಸರ್ಕಾರಿ ವಕೀಲರಾದ ಕೆ.ಎಸ್ ಹೂಲಿ ಹಾಗೂ ವಕೀಲ ವೃಂದದವರು, ಸಂಧಾನಕಾರ ವಕೀಲರು, ಪಕ್ಷಗಾರರು ಹಾಗೂ ಎಲ್ಲಾ ನ್ಯಾಯಾಲಯಗಳ ಸಿಬ್ಬಂದಿವರ್ಗ ಉಪಸ್ಥಿತರಿದ್ದು ಲೋಕ ಅದಾಲತ್ ಯಶಸ್ವಿಗೊಳಿಸಿದರು. ಎಲ್ಲಾ ತಾಲೂಕುಗಳ ನ್ಯಾಯಾಧೀಶರು ಹಾಗೂ ವಕೀಲ ವೃಂದದವರು, ಸಿಬ್ಬಂದಿ ವರ್ಗ, ಅಭಿಯೋಜನಾ ಇಲಾಖೆ, ಪೋಲೀಸ್ ಇಲಾಖೆ, ಅಬಕಾರಿ ಇಲಾಖೆ, ಗಣಿ ಮತ್ತು ಭೂ ಇಲಾಖೆ, ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ ಅಧಿಕಾರಿಗಳು ಆಯಾ ತಾಲೂಕಾ ನ್ಯಾಯಾಲಯಗಳಲ್ಲಿ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ರಾಜೀ ಸಂಧಾನ ಯಶಸ್ವಿಗೊಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್‌ಗೆ ಸಹಕಾರ ನೀಡಿದ ವಕೀಲ ವೃಂದದವರಿಗೆ, ಪಕ್ಷಗಾರರಿಗೆ, ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ಸಿಬ್ಬಂದಿವರ್ಗದವರಿಗೆ, ಜಿಲ್ಲಾ ನ್ಯಾಯಾಲಯದ ತಾಂತ್ರಿಕ ಸಿಬ್ಬಂದಿ ವರ್ಗದವರಿಗೆ, ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಕಂದಾಯ ಇಲಾಖೆ, ಜಿಲ್ಲಾ ಸರ್ಕಾರಿ ವಕೀಲರಿಗೆ, ಅಪರ ಜಿಲ್ಲಾ ಸರ್ಕಾರಿ ವಕೀಲರಿಗೆ, ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ, ಅಭಿಯೋಜನಾ ಇಲಾಖೆ, ಕಾರ್ಮಿಕ ಇಲಾಖೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ, ವಿಮೆ ಕಂಪನಿಯವರಿಗೆ, ಉಪ ವಿಭಾಗಾಧಿಕಾರಿಗಳಿಗೆ, ಅಬಕಾರಿ ಇಲಾಖೆ, ನಗರಸಭೆ, ಕೆಎಸ್‌ಆರ್‌ಟಿಸಿ, ಬ್ಯಾಂಕ್, ವಾರ್ತಾ ಇಲಾಖೆಯವರಿಗೆ ಹಾಗೂ ಎಲ್ಲಾ ಮಾಧ್ಯಮದವರಿಗೆ, ಲೋಕ ಅದಾಲತ್‌ಗೆ ಸಹಕಾರ ನೀಡಿದ ಎಲ್ಲರಿಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಅವರು ಧನ್ಯವಾದಗಳನ್ನು ಅರ್ಪಿಸಿದ್ದಾರೆ.

# ಜಿ.ಬಿ ತೋಟದ ಗ್ರಾಹಕರ ಮನ ಗೆದ್ದಿದ್ದಾರೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಗದಗ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ ಗದಗ ಆಶ್ರಯದಲ್ಲಿ ಗದಗ ಉತ್ಸವ–2023 ಕೈಗಾರಿಕಾ ಮತ್ತು ವಸ್ತು ಪ್ರದರ್ಶನ ಹಾಗೂ ಮಾರಾಟ ಮಳಿಗೆಯನ್ನು ನಗರದ ಗಣ್ಯ ವರ್ತಕರಾದ ಜಿ.ಬಿ ತೋಟದ ಅವರ ಮಳಿಗೆಯನ್ನು ಕಾನೂನು, ಸಂಸದೀಯ ವ್ಯವಹಾರ, ಪ್ರವಾಸೋದ್ಯಮ, ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ಹಾಗೂ ಜಗದ್ಗುರು ತೋಂಟದಾರ್ಯ ಮಠದ ಶ್ರೀ ಸಿದ್ಧರಾಮ ಮಹಾಸ್ವಾಮಿಗಳು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಿ.ಬಿ ತೋಟದ ಗದಗ ನಗರದಲ್ಲಿ ಬಹಳ ಹಿಂದಿನಿಂದಲೂ ಗಣ್ಯ ವ್ಯಾಪಾರಸ್ಥರಾಗಿದ್ದು, ತಮ್ಮದೇ ಆದ ಛಾಪನ್ನು ಮೂಡಿಸಿ, ಗ್ರಾಹಕರ ಮನ ಗೆದ್ದಿದ್ದಾರೆ. ಅವರ ವ್ಯಾಪಾರ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಮಾಲೀಕರಾದ ಲಿಂಗರಾಜ ಬಿ.ತೋಟದ ಹಾಗೂ ವಾಣಿಜ್ಯ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನ ಪುರಸಭೆ ಸಾಮಾನ್ಯ ನಿಧಿಯಲ್ಲಿ ಶೇ. 24.10 ಶೇ 7.25 ಮತ್ತು ಶೇ. 5 ಯೋಜನೆಯಡಿ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ವೈದ್ಯಕೀಯ ಚಿಕಿತ್ಸೆಗಾಗಿ ಸಹಾಯ ಧನ, ಇತರೆ ಬಡವರ್ಗದ ಫಲಾನುಭವಿಗಳಿಗೆ ವೈದ್ಯಕೀಯ ಚಿಕಿತ್ಸೆಗಾಗಿ ಸಹಾಯಧನ ಹಾಗೂ ಅಂಗವಿಕಲ ಫಲಾನಭವಿಗಳಿಗೆ ವೈದ್ಯಕೀಯ ಚಿಕಿತ್ಸೆಗಾಗಿ ಸಹಾಯಧನ ಪಾವತಿಸುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 16 ಕೊನೆಯ ದಿನವಾಗಿದ್ದು, ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಪುರಸಭೆ ಕಾರ್ಯಾಲಯ, ಮುಂಡರಗಿ ನಲ್ಮ ವಿಭಾಗದಲ್ಲಿ ಸಂಪರ್ಕಿಸಬಹುದಾಗಿದೆ.

**ಪುರುಷರಿಗೆ ಹಾಗೂ ಮಹಿಳೆಯರಿಗೆ ವಿವಿಧ ಕ್ರೀಡೆಗಳ ಆಯೋಜನೆ**

# ಇಂದಿನಿಂದ ಜಿಲ್ಲೆಯ ವಿವಿಧ ತಾಲೂಕುಗಳ ತಾಲೂಕು ಮಟ್ಟದ ದಸರಾ ಕ್ರೀಡಾಕೂಟ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನಲ್ಲಿ ಗದಗ ಜಿಲ್ಲೆಯ ವಿವಿಧ ತಾಲೂಕುಗಳ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಗಳನ್ನು ಪುರುಷ ಹಾಗೂ ಮಹಿಳೆಯರಿಗೆ ಬೆಳಿಗ್ಗೆ 9 ಗಂಟೆಗೆ ಈ ಕೆಳಗಿನಂತೆ ಆಯೋಜಿಸಲಾಗುವದು.

ಸೆಪ್ಟೆಂಬರ್ 12 ರಂದು ಶಿರಹಟ್ಟಿ ತಾಲೂಕಾ ಕ್ರೀಡಾಂಗಣ, ಸೆಪ್ಟೆಂಬರ್ 13 ರಂದು ನರಗುಂದ ತಾಲೂಕಾ ಕ್ರೀಡಾಂಗಣ, ಸೆಪ್ಟೆಂಬರ್ 14 ರಂದು ರೋಣ ತಾಲೂಕಾ ಕ್ರೀಡಾಂಗಣ, ಸೆಪ್ಟೆಂಬರ್ 16 ರಂದು ಗಜೇಂದ್ರಗಡ ಎಸ್.ಎಮ್. ಭೂಮರೆಡ್ಡಿ ಪದವಿ ಪೂರ್ವ ಮಹಾವಿದ್ಯಾಲಯದ ಮೈದಾನ ಗಜೇಂದ್ರಗಡ ಹಾಗೂ ಮುಂಡರಗಿ ತಾಲೂಕಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗುವುದು.

ನೋಂದಾಯಿತ ಯುವಕ/ಯುವತಿ ಸಂಘಗಳು ಮಾತ್ರ ಗುಂಪು ಆಟಗಳಲ್ಲಿ ಭಾಗವಹಿಸಲು ಅವಕಾಶವಿದೆ. ಈ ಕೆಳಕಂಡಂತೆ ಕ್ರೀಡಾಕೂಟಗಳನ್ನು ಏರ್ಪಡಿಸಲಾಗುವುದು.

**ದಸರಾ ಕ್ರೀಡಾ ಕೂಟದ ಸ್ಪರ್ಧೆಗಳ ವಿವರ**

**ಪುರುಷರಿಗಾಗಿ ಅಥ್ಲೇಟಿಕ್ಸ್ ಸ್ಪರ್ಧೆಗಳು**

100ಮೀ. 200ಮೀ, 400ಮೀ. 800ಮೀ. 1500ಮೀ. 5000ಮೀ 10000ಮೀ ಓಟ ಉದ್ದ ಜಿಗಿತ, ಎತ್ತರ ಜಿಗಿತ, ಟ್ರಿಪಲ್ ಜಂಪ್, ಗುಂಡು ಎಸೆತ ಜಾವಲಿನ ಎಸೆತ, ಚಕ್ರ ಎಸೆತ, 110ಮೀ ಹರ್ಡಲ್ಸ್, 4*100 ಮೀ. ರಿಲೇ, 4*400 ಮೀ. ರಿಲೇ.

**ಗುಂಪು ಸ್ಪರ್ಧೆಗಳು**

ವಾಲಿಬಾಲ್, ಕಬಡ್ಡಿ, ಖೋ–ಖೋ, ಥ್ರೋ ಬಾಲ್, ಫುಟ್‌ಬಾಲ್, ಯೋಗ.

**ಮಹಿಳೆಯರಿಗಾಗಿ ಅಥ್ಲೇಟಿಕ್ಸ್**

100ಮೀ. 200ಮೀ, 400ಮೀ. 800ಮೀ. 1500ಮೀ. 3000,ಮೀ ಓಟ ಉದ್ದ ಜಿಗಿತ, ಎತ್ತರ ಜಿಗಿತ, ಟ್ರಿಪಲ್ ಜಂಪ್, ಗುಂಡು ಎಸೆತ, ಜಾವಲಿನ ಎಸೆತ, ಚಕ್ರ ಎಸೆತ, 100ಮೀ ಹರ್ಡಲ್ಸ್, 4*100 ಮೀ. ರಿಲೇ, 4*400 ಮೀ. ರಿಲೇ

**ಗುಂಪು ಸ್ಪರ್ಧೆಗಳು**

ವಾಲಿಬಾಲ್, ಕಬಡ್ಡಿ, ಖೋ–ಖೋ, ಥ್ರೋ ಬಾಲ್, ಯೋಗ

ಗದಗ ಜಿಲ್ಲೆಯ ಎಲ್ಲ ತಾಲೂಕುಗಳ ತಾಲೂಕಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಅದೇ ತಾಲೂಕಿನವರೇ ಆಗಿರಬೇಕು. ಹಾಗೂ ಆಧಾರ ಕಾರ್ಡ್ ಅಥವಾ ಗ್ರಾಮ ಪಂಚಾಯತಿಯ ರಹವಾಸಿ ಪತ್ರ ಸದರಿ ದಿನದಂದು ಹಾಜರಪಡಿಸುವುದು. ನೋಂದಾಯಿತ ಯುವಕ/ಯುವತಿ ಸಂಘಗಳು ಮಾತ್ರ ಗುಂಪು ಆಟಗಳಲ್ಲಿ ಭಾಗವಹಿಸಲು ಅವಕಾಶವಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ತಾಲೂಕು– ಎಮ್‌ಎಸ್ ಕುಚಬಾಳ ದೂ:9449814341, ಲಕ್ಷ್ಮೇಶ್ವರ ತಾಲೂಕು– ಚಂದ್ರಶೇಖರ ಮೇಲಿನಮನಿ ದೂ: 8618320040, ಶಿರಹಟ್ಟಿ ತಾಲೂಕು– ಎಮ್ ಡಿ ತಳ್ಳಳ್ಳಿ ದೂ:9449068741, ನರಗುಂದ ತಾಲೂಕು–ಎನ್ ಆರ್ ನಿಡಗುಂದಿ ದೂ:9945256311, ರೋಣ ತಾಲೂಕು–ಜೆ.ಎಮ್ ಬೂದಿಹಾಳ ದೂ:8494975408, ಗಜೇಂದ್ರಗಡ ತಾಲೂಕು–ಎಚ್ ಆರ್ ನಿಡಗುಂದಿ ದೂ:8861748571, ಮುಂಡರಗಿ ತಾಲೂಕು–ಎಲ್ ಬಿ ಹುಡೇದ ದೂ:9481726168 ಇವರನ್ನು ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದಾಗಿದೆ.

# ಶ್ರೇಷ್ಠ ತೋಟಗಾರಿಕಾ ರೈತ /ರೈತ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆಯು 2023–24ನೇ ಸಾಲಿನಲ್ಲಿ ಡಿಸೆಂಬರ್ 23ರಿಂದ 25ರವರೆಗೆ ವಿಶ್ವವಿದ್ಯಾಲಯದ ಆವರಣದಲ್ಲಿ 'ತೋಟಗಾರಿಕಾ ಮೇಳ'ವನ್ನು ಹಮ್ಮಿಕೊಳ್ಳಲಾಗಿದೆ.

ಸದರಿ ತೋಟಗಾರಿಕಾ ಮೇಳದಲ್ಲಿ ತೋಟಗಾರಿಕೆಯ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ಕೃಷಿಕರಿಗೆ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ರಾಜ್ಯದ 24 ಜಿಲ್ಲೆಗಳಿಗೆ ಪ್ರತಿಯೊಂದು ಜಿಲ್ಲೆಗೆ ಒಬ್ಬ ಶ್ರೇಷ್ಠ ತೋಟಗಾರಿಕಾ ರೈತ ಅಥವಾ ರೈತ ಮಹಿಳೆಯನ್ನು ಆಯ್ಕೆ ಮಾಡಿ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವದು.

ಈ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಲು ಬಯಸುವ ಗದಗ ಜಿಲ್ಲೆಯ ರೈತ/ರೈತ ಮಹಿಳೆಯರು ಅರ್ಜಿ ನಮೂನೆಯನ್ನು ದಾನವೀರ ಸಿರಸಂಗಿ ಶ್ರೀ ಲಿಂಗರಾಜ ದೇಸಾಯಿ ತೋಟಗಾರಿಕಾ ಅಭಿಯಾಂತ್ರಿಕ ಮತ್ತು ಆಹಾರ ತಂತ್ರಜ್ಞಾನ ಮಹಾವಿದ್ಯಾಲಯ, ದೇವಿಹೊಸೂರು ಹಾವೇರಿ ಈ ಕಚೇರಿಯಲ್ಲಿ ಪಡೆಯಬಹುದು ಅಥವಾ ತೋ.ವಿ.ವಿ.ಯ ವೆಬ್‌ಸೈಟ್: www.uhsbagalkot.karnataka.gov.in ಮೂಲಕ (ಅರ್ಜಿ ನಮೂನೆ: ಅನುಬಂಧ–1) ಕೂಡ ಪಡೆದುಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ನವೆಂಬರ್ 6 ರೊಳಗೆ ಈ ಮೇಲಿನ ವಿಳಾಸಕ್ಕೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಮೊ: 9164405294/9480696396 ಅಥವಾ ಶುಲ್ಕ ರಹಿತ ಉದ್ಯಾನ ಸಹಾಯವಾಣಿ 1800–425–7910 ಸಂಖ್ಯೆಗೆ ಸಂಪರ್ಕಿಸಬಹುದು.

ಅರ್ಜಿದಾರರು ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕದ ಯಾವುದೇ ಕೃಷಿ/ತೋಟಗಾರಿಕೆ/ಪಶುಸಂಗೋಪನೆ ಮತ್ತು ಐಸಿಎಆರ್ ಪ್ರಶಸ್ತಿಗಳನ್ನು ತಮ್ಮ ಹಾಗೂ ತಮ್ಮ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಪಡೆದಿರಬಾರದು. ಅರ್ಜಿದಾರರು ನಿಗದಿತ ಅರ್ಜಿ ನಮೂನೆಯಲ್ಲಿ ಸಂಪೂರ್ಣ ವಿವರಗಳನ್ನು ಒಳಗೊಂಡ ಮಾಹಿತಿಯನ್ನು ನೀಡಬೇಕು. ಸಲ್ಲಿಕೆಯಾದ ಅರ್ಜಿಗಳನ್ನು ಆಯ್ಕೆ ಸಮಿತಿಯು ಪರಿಶೀಲಿಸಿ ಕಿರುಪಟ್ಟಿ ಮಾಡಿದ ಮೂರು ಕ್ಷೇತ್ರಗಳಿಗೆ ಮಾತ್ರ ಕ್ಷೇತ್ರ ವೀಕ್ಷಣೆ ಕೈಗೊಳ್ಳಲಾಗುವುದು. ಆಯ್ಕೆಯು ವಿಶ್ವವಿದ್ಯಾಲಯದ ನಿಯಮ ಹಾಗೂ ಆಯ್ಕೆ ಸಮಿತಿಯ ನಿರ್ಧಾರಕ್ಕೆ ಒಳಪಟ್ಟಿರುತ್ತದೆ.

# ಮಜ್ಜೂರು ಪ್ರೌಢಶಾಲಾ ವಾಲಿಬಾಲ್ ತಂಡ ಜಿಲ್ಲಾ ಮಟ್ಟಕ್ಕೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಮಜ್ಜೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ 2022–23ನೇ ಸಾಲಿನ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಬಾಲಕರ ವಾಲಿಬಾಲ್ ಫೈನಲ್ ಪಂದ್ಯಾವಳಿಯಲ್ಲಿ ಮಜ್ಜೂರು ಪ್ರೌಢಶಾಲೆ ಹಾಗೂ STPMB ಪ್ರೌಢಶಾಲೆಯ ಕ್ರೀಡಾಪಟುಗಳ ನಡುವೆ ಸ್ಪರ್ಧೆ ಏರ್ಪಟ್ಟಿತು.

STPMB ಪ್ರೌಢಶಾಲಾ ಕ್ರೀಡಾಪಟುಗಳು 24 ಅಂಕ ಪಡೆದರೆ, ಮಜ್ಜೂರು ಪ್ರೌಢಶಾಲಾ ವಿದ್ಯಾರ್ಥಿಗಳು 25 ಅಂಕ ಪಡೆಯುವ ಮೂಲಕ ಗೆಲುವು ಸಾಧಿಸಿ, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದರು.

ತಂಡದ ನಾಯಕ ಆಫ್ರೀದ್ ಬೈರಕದಾರ ನೇತೃತ್ವದಲ್ಲಿ ಪುನೀತ್ ಜಾಲವಾಡಗಿ, ಇರ್ಫಾನ್ ಹೆಸರೂರ, ನವೀನ ಕಜ್ಜಿ, ಅಭಿಷೇಕ ಹೊಸಳ್ಳಿ, ಹನುಮಂತ ಹಡಗಲಿ ಶಾಲೆಗೆ ಕೀರ್ತಿ ತಂದಿದ್ದಾರೆ.

ಸಾಧಕ ವಿದ್ಯಾರ್ಥಿಗಳ ತಂಡವನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಶಿಕ್ಷಣ ಪ್ರೇಮಿಗಳು, ದೈಹಿಕ ಶಿಕ್ಷಕರು, ಶಾಲೆಯ ಕನ್ನಡ ಭಾಷಾ ಶಿಕ್ಷಕ ಬಸಪ್ಪ ತೆಲಸಂಗ, ಮುಖ್ಯೋಪಾಧ್ಯಾಯರಾದ ರಾಧಾ ಕುಲಕರ್ಣಿ, ಕಿರಣ ಕುಮಾರ್ ಮಕರಬ್ಬಿ, ದಾಮೋದರ್, ಸಹ ಶಿಕ್ಷಕಿ ರೇಷ್ಮಾ ಮುಂತಾದವರು ಅಭಿನಂದಿಸಿದ್ದಾರೆ.

# ಕೆಳದಿ ಚನ್ನಮ್ಮ ಪ್ರಶಸಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನಲ್ಲಿ ಹೊಯ್ಸಳ ಕೆಳದಿ ಚನ್ನಮ್ಮ ಪ್ರಶಸ್ತಿ ಯೋಜನೆಯಡಿ ಜಿಲ್ಲಾ ಮಟ್ಟದ ಅಸಾಧಾರಣಾ ಪ್ರತಿಭಾ ಪುರಸ್ಕಾರಕ್ಕಾಗಿ ನಾವೀನ್ಯತೆ, ತಾರ್ಕಿಕ ಕ್ಷೇತ್ರಗಳಲ್ಲಿ ಅಸಾಧಾರಣಾ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಅಸಾಧಾರಣ ಪ್ರತಿಭಾ ಪುರಸ್ಕಾರ ಪ್ರಶಸ್ತಿಯನ್ನು ನೀಡಲಾಗುತ್ತದೆ.

5 ರಿಂದ 18 ವರ್ಷದ ಒಳಗಿನ ವಯೋಮಿತಿಯೊಳಗಿರುವ ಮಕ್ಕಳಿಗೆ ಪ್ರತಿ ಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ ಒಟ್ಟು 4 ಮಕ್ಕಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗುವುದು.

ಆಯ್ಕೆಯಾದ ಪ್ರತಿ ಮಗುವಿಗೆ ತಲಾ ರೂ.10,000/– ನಗದು ಮತ್ತು ಪ್ರಶಸ್ತಿ ಪತ್ರವನ್ನು ನೀಡಲಾಗುತ್ತಿದೆ. ಅಸಾಧಾರಣ ಸಾಧನೆ ಮಾಡಿದ ಮಕ್ಕಳು ಅಸಾಧಾರಣಾ ಪ್ರತಿಭಾ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಸಲ್ಲಿಸಬೇಕು. ಸೆಪ್ಟೆಂಬರ್ 20 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ನಾವೀನ್ಯತೆ ತಾರ್ಕಿಕ ಈ ಕ್ಷೇತ್ರಗಳಲ್ಲಿ ತಮಗೆ ಸಂಬಂಧಿಸಿದ ಒಂದು ಕ್ಷೇತ್ರಕ್ಕೆ ಮಾತ್ರ ಆಯ್ಕೆ ಮಾಡಿಕೊಳ್ಳುವುದು. ಪ್ರತಿಭೆ ಹೊಂದಿರುವ ಬಗ್ಗೆ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವ ಪತ್ರಿಕೆಯ ತುಣುಕುಗಳನ್ನು ಲಗತ್ತಿಸುವುದು. ಅಂತಾರಾಷ್ಟ್ರೀಯ ಮಟ್ಟದಲ್ಲಿ/ ರಾಷ್ಟಮಟ್ಟದಲ್ಲಿ/ ರಾಜ್ಯ ಮಟ್ಟದಲ್ಲಿ/ ಜಿಲ್ಲಾ ಮಟ್ಟದಲ್ಲಿ/ ತಾಲೂಕಾ ಮಟ್ಟದಲ್ಲಿ ಭಾಗವಹಿಸಿರುವ ಪ್ರಶಸ್ತಿ/ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಸಂಬಂಧಿಸಿದ ಕ್ಷೇತ್ರದ ಛಾಯಾ ಚಿತ್ರ ಲಗತ್ತಿಸುವುದು. ಆಯ್ಕೆ ಮಾಡುವ ಕ್ಷೇತ್ರದ ಬಗ್ಗೆ ನಾಲ್ಕು ಸಾಲುಗಳಲ್ಲಿ ಮಾಹಿತಿ ಒದಗಿಸುವುದು. ಪ್ರಶಸ್ತಿಗಾಗಿ ಆಯ್ಕೆ ಮಾಡುವ ಮಕ್ಕಳು ಕನಿಷ್ಠ 5 ವರ್ಷ ಕರ್ನಾಟಕ ರಾಜ್ಯದಲ್ಲಿ ನೆಲಸಿರತಕ್ಕದ್ದು. ಈ ಬಗ್ಗೆ ಸ್ವಯಂ ದೃಢೀಕರಣ ಪಡೆಯುವುದು. ಪ್ರಶಸ್ತಿಗೆ ಅರ್ಜಿ ಸಲ್ಲಿಸಿದ ನಂತರ ಮಗು ಮರಣ ಹೊಂದಿದಲ್ಲಿ ಆ ಮಗು ಪ್ರಶಸ್ತಿಗೆ ಅರ್ಹವಾಗಿದ್ದಲ್ಲಿ ಮರಣೋತ್ತರ ಪ್ರಶಸ್ತಿಗೆ ಪರಿಗಣಿಸಬಹುದಾಗಿದೆ.

ಅರ್ಜಿದಾರರು 5 ರಿಂದ 18 ವರ್ಷದೊಳಗಿನವರಾಗಿರಬೇಕು. (ಜುಲೈ 31 ಕ್ಕೆ) ವಯಸ್ಸಿನ ಬಗ್ಗೆ ಜನನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿದ ಪ್ರತಿ ಲಗತ್ತಿಸಬೇಕು. ಹಿಂದಿನ ವರ್ಷಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಅಸಾಧಾರಣ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ.

ಅರ್ಜಿಯನ್ನು ದ್ವಿಪ್ರತಿಯಲ್ಲಿ ಸಲ್ಲಿಸಬೇಕು.

ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕೊಠಡಿ ಸಂಖ್ಯೆ:006, ಜಿಲ್ಲಾ ಆಡಳಿತ ಭವನ, ಗದಗ–582101 ದೂರವಾಣಿ ಸಂಖ್ಯೆ:08372–220711 ಸಂಪರ್ಕಿಸಬಹುದಾಗಿದೆ.

# ಶಿಘ್ರದಲ್ಲಿ ಮತ್ತೆ ಪಂಚಮಸಾಲಿ ಹೋರಾಟ: ಸ್ವಾತಿ ಅಕ್ಕಿ

■ವಿಜಯಸಾಕ್ಷಿ ಸುದ್ದಿ, ಗದಗ



ಅಖಂಡ ಪಂಚಮಸಾಲಿ ಸಮುದಾಯದ ಏಳಿಗೆಗಾಗಿ ಹಲವು ವರ್ಷಗಳಿಂದ 2ಎ ಮೀಸಲಾತಿಗಾಗಿ ಹೋರಾಟ ಮಾಡುತ್ತಾ ಬಂದಿದ್ದೇವೆ. ಆದರೆ, ಯಾವುದೇ ಸರ್ಕಾರಗಳು ಇದುವರೆಗೂ ಪಂಚಮಸಾಲಿಗಳ ಹೋರಾಟಕ್ಕೆ ಸ್ಪಂದಿಸದ ಹಿನ್ನೆಲೆಯಲ್ಲಿ ಮತ್ತೆ ಕೂಡಲಸಂಗಮದ ಪೀಠಾಧಿಪತಿ ಪ.ಪೂಜ್ಯ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಅತಿ ಶೀಘ್ರದಲ್ಲಿ ಹೋರಾಟ ಕೈಗೊಳ್ಳುವುದಾಗಿ ಗದಗ ಜಿಲ್ಲಾ ಪಂಚಮಸಾಲಿ ಮಹಿಳಾ ಅಧ್ಯಕ್ಷೆ ಸ್ವಾತಿ ಅಕ್ಕಿ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪಂಚಮಸಾಲಿ ಸಮುದಾಯ ದೊಡ್ಡ ಸಮುದಾಯವಾದರೂ ಕೂಡ ಮೀಸಲಾತಿ ಕೊರತೆಯಿಂದ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ ಸಮಾಜವಾಗುತ್ತಿದೆ. ನಮ್ಮ ಸಮಾಜದ ಬಲವರ್ಧನೆಗಾಗಿ 2ಎ ಮೀಸಲಾತಿ ನಮಗೆ ಅಗತ್ಯವಾಗಿದೆ. ಕೂಡಲೇ ರಾಜ್ಯ ಸರ್ಕಾರ ಮೀಸಲಾತಿಗಾಗಿ ಶಿಫಾರಸ್ಸು ಸಲ್ಲಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ನೀಡುವ ಭರವಸೆಯನ್ನು ನೀಡಿತ್ತು. ಆದರೆ, ಸರ್ಕಾರ ಅಧಿಕಾರಕ್ಕೆ ಬಂದು 100 ದಿನ ಕಳೆದರೂ ಮೀಸಲಾತಿ ಬಗ್ಗೆ ಯಾವುದೇ ಚರ್ಚೆ ನಡೆಸಿಲ್ಲ. ಈ ಹಿನ್ನೆಲೆಯಲ್ಲಿ ಮತ್ತೊಮ್ಮೆ ನಾವು ಹೋರಾಟಕ್ಕೆ ಸಿದ್ದರಾಗುತ್ತಿದ್ದೇವೆ ಎಂದು ಎಚ್ಚರಿಸಿದ್ದಾರೆ.

## ನಿಧನ ವಾರ್ತೆ

### ಲೀಲಾಂಬಿಕಾ ಚಂದ್ರಶೇಖರ್ ಚೆನ್ನಳ್ಳಿ



**ಮುಂಡರಗಿ:** ಪಟ್ಟಣದ ಜೆ.ಟಿ ಪ್ರೌಢಶಾಲೆಯ ನಿವೃತ್ತ ಶಿಕ್ಷಕಿ ಲೀಲಾಂಬಿಕಾ ಚಂದ್ರಶೇಖರ್ ಚೆನ್ನಳ್ಳಿ (72) ರವಿವಾರ ಅನಾರೋಗ್ಯದಿಂದ ನಿಧನರಾದರು.

ಮೃತರು ಪತಿ, ಸಹೋದರರು, ಸಹೋದರಿಯನ್ನು ಬಿಟ್ಟು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಸೋಮವಾರ ಕೊಪ್ಪಳ ತಾಲೂಕಿನ ಮುರ್ಲಾಪೂರ ಗ್ರಾಮದಲ್ಲಿ ನೇರವೇರಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka